ಸತ್ಯ ಮತ್ತು ಧೈರ್ಯದ ಧ್ವನಿ

# ತುಂಗ ಬಿಂಬ

TUNGA BIMBA | KANNADA DAILY MORNING | ಕನ್ನಡ ದಿನ ಪತ್ರಿಕೆ | RNI No: KARKAN/2023/86923

**ಮಹಿಳಾ ಏಷ್ಯಾ ಕಪ್ ಟ್ರೋಫಿ ವಿವಾದಕ್ಕೆ ಪರಿಹಾರ ಸೂಚಿಸಿದ BCCI; ಒಪ್ಪದ ACC ವಿರುದ್ಧ ದೇವಜಿತ್ ಸೈಕಿಯಾ ಕಿಡಿ**



ಸಂಪುಟ: 04 Vol: | ಸಂಚಿಕೆ: 84 Issue: | ರಾಯಚೂರು Raichur | 16-09-2026 | ಬುಧವಾರ Wednesday | ಪುಟ: 04 Page: | ಬೆಲೆ: ₹ 2.00 Price: | Postal Reg No.: RCR/L/RNP/95/2025-27 | tungabimba@gmail.com | ಸಂಪಾದಕರು : ಗುರುರಾಜ ಕೆ | Editor: Gururaja K 98863 85685

# UPI ಬದಲಾವಣೆ: ₹2,000 ಮೇಲ್ಪಟ್ಟ ಆಯ್ದ ವ್ಯಾಪಾರಿ ವಹಿವಾಟಿಗೆ ಶೇ.0.4 MDR




ನವದೆಹಲಿ: ಯುಪಿಐ (UPI) ಪಾವತಿ ವ್ಯವಸ್ಥೆಯಲ್ಲಿ ಮಹತ್ವದ ಬದಲಾವಣೆ ಘೋಷಿಸಲಾಗಿದ್ದು, 2026ರ ಅಕ್ಟೋಬರ್ 15ರಿಂದ ₹2,000ಕ್ಕಿಂತ ಹೆಚ್ಚಿನ ಆಯ್ದ ವ್ಯಕ್ತಿಯಿಂದ-ವ್ಯಾಪಾರಿಗೆ (P2M) ನಡೆಯುವ UPI ವಹಿವಾಟುಗಳಿಗೆ ಶೇ.0.4ರಷ್ಟು ಮರ್ಚೆಂಟ್ ಡಿಸ್ಕೌಂಟ್ ರೇಟ್ (MDR) ಅನ್ವಯವಾಗಲಿದೆ. ಆದರೆ ಸಾಮಾನ್ಯ ಗ್ರಾಹಕರು UPI ಮೂಲಕ ಪಾವತಿ ಮಾಡುವಾಗ ಪ್ರತ್ಯೇಕ ವಹಿವಾಟು ಶುಲ್ಕ ಪಾವತಿಸಬೇಕಾಗುವುದಿಲ್ಲ. ವ್ಯಕ್ತಿಯಿಂದ ವ್ಯಕ್ತಿಗೆ (P2P) ನಡೆಯುವ UPI ಹಣ ವರ್ಗಾವಣೆಗಳು ಸಂಪೂರ್ಣ ಉಚಿತವಾಗಿಯೇ ಮುಂದುವರಿಯಲಿವೆ.

ನ್ಯಾಷನಲ್ ಪೇಮೆಂಟ್ಸ್ ಕಾರ್ಪೊರೇಷನ್ ಆಫ್ ಇಂಡಿಯಾ (NPCI) ಪ್ರಕಟಿಸಿರುವ ಹೊಸ ವ್ಯವಸ್ಥೆಯ ಪ್ರಕಾರ, ಸಾಮಾನ್ಯ ವ್ಯಾಪಾರಿಗಳಿಗೆ ₹2,000ಕ್ಕಿಂತ ಹೆಚ್ಚಿನ ಅರ್ಹ P2M ವಹಿವಾಟುಗಳ ಮೇಲೆ ಶೇ.0.4 MDR ಅನ್ವಯವಾಗಲಿದೆ. ₹75,000 ಅಥವಾ ಅದಕ್ಕಿಂತ ಹೆಚ್ಚಿನ ಮೊತ್ತದ ವಹಿವಾಟಿಗೆ ಗರಿಷ್ಠ MDR ಅನ್ನು ₹300ಕ್ಕೆ ಮಿತಿಗೊಳಿಸಲಾಗಿದೆ. ಅಂದರೆ ವಹಿವಾಟಿನ ಮೊತ್ತ ಹೆಚ್ಚಿದರೂ ಒಂದು ಅರ್ಹ ವಹಿವಾಟಿಗೆ ಸಾಮಾನ್ಯ ವ್ಯಾಪಾರಿಯಿಂದ ₹300ಕ್ಕಿಂತ ಹೆಚ್ಚಿನ MDR ವಸೂಲಿ ಮಾಡುವಂತಿಲ್ಲ.

ಉದಾಹರಣೆಗೆ ಸಾಮಾನ್ಯ ವ್ಯಾಪಾರಿಗೆ ಗ್ರಾಹಕ ₹10,000 UPI ಮೂಲಕ ಪಾವತಿಸಿದರೆ, ಅನ್ವಯವಾಗುವ MDR ಶೇ.0.4ರಂತೆ ₹40 ಆಗುತ್ತದೆ. ₹50,000 ವಹಿವಾಟಿಗೆ ₹200 MDR ಆಗಲಿದೆ. ₹75,000ಕ್ಕೆ ಶೇ.0.4 ಲೆಕ್ಕದಲ್ಲಿ ₹300 ಆಗಲಿದ್ದು, ಅದಕ್ಕಿಂತ ಹೆಚ್ಚಿನ ಅರ್ಹ ವಹಿವಾಟಿನಲ್ಲಿಯೂ ಗರಿಷ್ಠ ಮಿತಿ ₹300 ಆಗಿರಲಿದೆ. ಈ ಶುಲ್ಕವನ್ನು ಗ್ರಾಹಕರ ಮೇಲೆ ವರ್ಗಾಯಿಸಬಾರದು ಎಂಬ ನಿಯಮವೂ ಇದೆ.

## ಸಣ್ಣ ವ್ಯಾಪಾರಿಗಳಿಗೆ ವಿನಾಯಿತಿ

ಹೊಸ ವ್ಯವಸ್ಥೆಯಲ್ಲಿ ಸಣ್ಣ ವ್ಯಾಪಾರಿಗಳಿಗೆ ರಕ್ಷಣೆ ನೀಡಲಾಗಿದೆ. UPI ಮೂಲಕ ತಿಂಗಳಿಗೆ ₹1 ಲಕ್ಷದೊಳಗಿನ ವಹಿವಾಟು ಸ್ವೀಕರಿಸುವ ಮೈಕ್ರೋ ಅಥವಾ ಸಣ್ಣ ವ್ಯಾಪಾರಿಗಳು MDR ವ್ಯಾಪ್ತಿಯಿಂದ ಹೊರಗಿರಲಿದ್ದು, ₹2,000ಕ್ಕಿಂತ ಹೆಚ್ಚಿನ ವಹಿವಾಟುಗಳಿದ್ದರೂ ಈ ವಿನಾಯಿತಿ ಅನ್ವಯವಾಗಲಿದೆ ಎಂದು ವರದಿಯಾಗಿದೆ. ಇದರಿಂದ ಕಿರಾಣಿ ಅಂಗಡಿಗಳು ಮತ್ತು ಸಣ್ಣ ಮಟ್ಟದ ಸ್ಥಳೀಯ ವ್ಯಾಪಾರಿಗಳ ಬಹುಪಾಲು UPI ವಹಿವಾಟುಗಳು ಶುಲ್ಕಮುಕ್ತವಾಗಿಯೇ ಮುಂದುವರಿಯಲಿವೆ.

ರೈಲ್ವೆ, ದೂರಸಂಪರ್ಕ, ವಿಮೆ ಮತ್ತು ಇಂಧನ ಸೇರಿದಂತೆ ಕೆಲವು ವಿಶೇಷ ವರ್ಗಗಳಿಗೆ ಪ್ರತ್ಯೇಕ ರಿಯಾಯಿತಿ ದರ ನಿಗದಿಪಡಿಸಲಾಗಿದೆ. ಈ ವರ್ಗಗಳಲ್ಲಿ ₹2,000ಕ್ಕಿಂತ ಹೆಚ್ಚಿನ ಅರ್ಹ UPI ವಹಿವಾಟಿಗೆ ಶೇ.0.4ರ ಬದಲಾಗಿ ಪ್ರತಿ ವಹಿವಾಟಿಗೆ ₹5 ಸ್ಥಿರ MDR ಅನ್ವಯವಾಗಲಿದೆ. ಹೀಗಾಗಿ ಪೆಟ್ರೋಲ್-ಡೀಸೆಲ್ ಖರೀದಿ ಅಥವಾ ನಿರ್ದಿಷ್ಟ ಸಾರ್ವಜನಿಕ ಸೇವೆಗಳ ಪಾವತಿಯಲ್ಲಿ ವ್ಯಾಪಾರಿಗಳ ಮೇಲಿನ ವೆಚ್ಚವನ್ನು ನಿಯಂತ್ರಿಸುವ ವ್ಯವಸ್ಥೆ ಮಾಡಲಾಗಿದೆ.

## ಗ್ರಾಹಕರಿಗೆ ಶುಲ್ಕ ಇಲ್ಲ

ಹೊಸ ನಿಯಮದ ಕುರಿತು ಗ್ರಾಹಕರಲ್ಲಿ ಗೊಂದಲ ಮೂಡುವ ಸಾಧ್ಯತೆ ಇರುವ ಹಿನ್ನೆಲೆಯಲ್ಲಿ ಪ್ರಮುಖವಾಗಿ ಗಮನಿಸಬೇಕಾದ ಅಂಶವೆಂದರೆ, ಇದು ಗ್ರಾಹಕರ ಮೇಲೆ 2ನೇ ಪುಟಕ್ಕೆ

# ಕುರ್ಡಿ ಗ್ರಾಮದಲ್ಲಿ ₹25 ಲಕ್ಷವೆಚ್ಚದ ಸಮುದಾಯ ಭವನ ಉದ್ಘಾಟನೆ: ಶಾಸಕ ಬಸನಗೌಡ ದದ್ದಲ್



ರಾಯಚೂರು: ರಾಯಚೂರು ಗ್ರಾಮೀಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಕುರ್ಡಿ ಗ್ರಾಮದಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ (ಕೆಕೆಆರ್‌ಡಿಬಿ) ಅನುದಾನದಡಿ ₹25 ಲಕ್ಷ ವೆಚ್ಚದಲ್ಲಿ ನಿರ್ಮಿಸಲಾದ ಸಮುದಾಯ ಭವನವನ್ನು ರಾಯಚೂರು ಗ್ರಾಮೀಣ ಶಾಸಕ ಬಸನಗೌಡ ದದ್ದಲ್ ಉದ್ಘಾಟಿಸಿದರು.

ಕಾರ್ಯಕ್ರಮದ ಅಂಗವಾಗಿ ಬಿಚ್ಚಾಲಿಯ ಶ್ರೀ ವೀರಭದ್ರ ಶಿವಾಚಾರ್ಯ ತಾತನವರ ಆಶೀರ್ವಾದ ಪಡೆದ ಶಾಸಕ ಬಸನಗೌಡ ದದ್ದಲ್ ಅವರು, ಬಳಿಕ ನೂತನ ಸಮುದಾಯ ಭವನವನ್ನು ಉದ್ಘಾಟಿಸಿ ಗ್ರಾಮಸ್ಥರ ಬಳಕೆಗೆ ಸಮರ್ಪಿಸಿದರು.

ಗ್ರಾಮೀಣ ಪ್ರದೇಶಗಳಲ್ಲಿ ಸಾರ್ವಜನಿಕ ಹಾಗೂ ಸಾಮಾಜಿಕ ಕಾರ್ಯಕ್ರಮಗಳನ್ನು ಆಯೋಜಿಸಲು ಸುಸಜ್ಜಿತ ಸಮುದಾಯ ಭವನಗಳ ಅಗತ್ಯವಿದ್ದು, ಈ ಹಿನ್ನೆಲೆಯಲ್ಲಿ ಕೆಕೆಆರ್‌ಡಿಬಿ ಅನುದಾನದಡಿ ₹25 ಲಕ್ಷ ವೆಚ್ಚದಲ್ಲಿ ಕುರ್ಡಿ ಗ್ರಾಮದಲ್ಲಿ ಸಮುದಾಯ ಭವನ ನಿರ್ಮಿಸಲಾಗಿದೆ. ನೂತನ ಭವನವು ಗ್ರಾಮದ ಸಾರ್ವಜನಿಕ, ಸಾಮಾಜಿಕ, ಸಾಂಸ್ಕೃತಿಕ ಹಾಗೂ ವಿವಿಧ ಸಮುದಾಯ ಕಾರ್ಯಕ್ರಮಗಳ ಆಯೋಜನೆಗೆ ಅನುಕೂಲವಾಗಲಿದೆ.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಬಸನಗೌಡ ದದ್ದಲ್, ಗ್ರಾಮೀಣ ಪ್ರದೇಶಗಳ ಸಮಗ್ರ ಅಭಿವೃದ್ಧಿಗೆ ಮೂಲಸೌಕರ್ಯಗಳ ನಿರ್ಮಾಣ ಅತ್ಯಂತ ಅಗತ್ಯವಾಗಿದೆ. ಗ್ರಾಮಸ್ಥರಿಗೆ 2ನೇ ಪುಟಕ್ಕೆ

# ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ಅಭಿವೃದ್ಧಿ ಕಾಮಗಾರಿಗಳ ಪರಿಶೀಲನೆ



ರಾಯಚೂರು: ರಾಯಚೂರು ಗ್ರಾಮೀಣ ಶಾಸಕ ಬಸನಗೌಡ ದದ್ದಲ್ ಅವರು ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯಕ್ಕೆ ಭೇಟಿ ನೀಡಿ, ವಿಶ್ವವಿದ್ಯಾಲಯದಲ್ಲಿ ಪ್ರಗತಿಯಲ್ಲಿರುವ ವಿವಿಧ ಪ್ರಮುಖ ಅಭಿವೃದ್ಧಿ ಕಾಮಗಾರಿಗಳನ್ನು ಪರಿಶೀಲಿಸಿದರು.

ವಿಶ್ವವಿದ್ಯಾಲಯದ ಆವರಣದಲ್ಲಿ ನಡೆಯುತ್ತಿರುವ ರಸ್ತೆ ನಿರ್ಮಾಣ, ಉದ್ಯಾನವನಗಳ ಅಭಿವೃದ್ಧಿ, ವಿದ್ಯಾರ್ಥಿ ವಸತಿ ನಿಲಯಗಳ ಕಟ್ಟಡ ಕಾಮಗಾರಿಗಳು ಸೇರಿದಂತೆ ವಿವಿಧ ಯೋಜನೆಗಳ ಪ್ರಗತಿ ಹಾಗೂ ಕಾಮಗಾರಿಗಳ ಗುಣಮಟ್ಟದ ಕುರಿತು ಸಂಬಂಧಪಟ್ಟ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡರು.

ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯವು ರಾಯಚೂರು ಮತ್ತು ಯಾದಗಿರಿ ಜಿಲ್ಲೆಗಳ ಸಾವಿರಾರು ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣದ ಅವಕಾಶಗಳನ್ನು ಒದಗಿಸುತ್ತಿರುವ ಪ್ರಮುಖ ಶಿಕ್ಷಣ ಸಂಸ್ಥೆಯಾಗಿದ್ದು, ವಿಶ್ವವಿದ್ಯಾಲಯದಲ್ಲಿ ಅಗತ್ಯ ಮೂಲಸೌಕರ್ಯಗಳ ಅಭಿವೃದ್ಧಿಯಿಂದ ವಿದ್ಯಾರ್ಥಿಗಳಿಗೆ ಉತ್ತಮ ಕಲಿಕಾ ವಾತಾವರಣ, ವಸತಿ ಹಾಗೂ ಇತರೆ ಅಗತ್ಯ ಸೌಲಭ್ಯಗಳು ಲಭ್ಯವಾಗಲಿವೆ ಎಂದು ತಿಳಿಸಿದರು.

ವಿದ್ಯಾರ್ಥಿಗಳ ಭವಿಷ್ಯಕ್ಕೆ ಪೂರಕವಾಗುವ ಗುಣಮಟ್ಟದ ಶಿಕ್ಷಣ ಹಾಗೂ ಆಧುನಿಕ ಮೂಲಸೌಕರ್ಯಗಳನ್ನು ಒದಗಿಸುವ ನಿಟ್ಟಿನಲ್ಲಿ ವಿಶ್ವವಿದ್ಯಾಲಯದ ಅಭಿವೃದ್ಧಿಗೆ ಅಗತ್ಯ ಸಹಕಾರ ನೀಡಲಾಗುವುದು ಎಂದು ಶಾಸಕ ಬಸನಗೌಡ ದದ್ದಲ್ ಹೇಳಿದರು.

# ಮಟಮಾರಿ ಗ್ರಾಮದಲ್ಲಿ ₹3 ಕೋಟಿ ವೆಚ್ಚದ ರಸ್ತೆ ಕಾಮಗಾರಿಗೆ ಶಾಸಕ ಬಸನಗೌಡ ದದ್ದಲ್ ಭೂಮಿಪೂಜೆ



ರಾಯಚೂರು: ರಾಯಚೂರು ಗ್ರಾಮೀಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಮಟಮಾರಿ ಗ್ರಾಮದಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ (ಕೆಕೆಆರ್‌ಡಿಬಿ) ಮ್ಯಾಕ್ರೋ ಯೋಜನೆಯಡಿ ಅಂದಾಜು ₹3 ಕೋಟಿ ವೆಚ್ಚದಲ್ಲಿ ಕೈಗೊಳ್ಳಲಾಗುತ್ತಿರುವ ರಸ್ತೆ ನಿರ್ಮಾಣ ಕಾಮಗಾರಿಗೆ ರಾಯಚೂರು ಗ್ರಾಮೀಣ ಶಾಸಕ ಬಸನಗೌಡ ದದ್ದಲ್ ಭೂಮಿಪೂಜೆ ನೆರವೇರಿಸಿದರು.

ಗ್ರಾಮದ ಬಹುದಿನಗಳ ಬೇಡಿಕೆಯಾಗಿದ್ದ ರಸ್ತೆ ಕಾಮಗಾರಿಗೆ ಚಾಲನೆ ದೊರೆತಿದ್ದು, ಕಾಮಗಾರಿ ಪೂರ್ಣಗೊಂಡ ಬಳಿಕ ಮಟಮಾರಿ ಗ್ರಾಮಕ್ಕೆ ಪ್ರಮುಖ ಸಂಪರ್ಕ ರಸ್ತೆಗಳೊಂದಿಗೆ ಸುಗಮ ಹಾಗೂ ಉತ್ತಮ ರಸ್ತೆ ಸಂಪರ್ಕ ಲಭ್ಯವಾಗಲಿದೆ.

ಹೊಸ ರಸ್ತೆ ನಿರ್ಮಾಣದಿಂದ ಗ್ರಾಮಸ್ಥರ ದೈನಂದಿನ ಸಂಚಾರ ಸುಗಮವಾಗುವುದರ ಜೊತೆಗೆ, ವಿದ್ಯಾರ್ಥಿಗಳು, ರೈತರು, ವ್ಯಾಪಾರಸ್ಥರು ಹಾಗೂ ಸಾರ್ವಜನಿಕರಿಗೆ ಹೆಚ್ಚಿನ ಅನುಕೂಲವಾಗಲಿದೆ. ಕೃಷಿ ಉತ್ಪನ್ನಗಳ ಸಾಗಣೆ, ಶಿಕ್ಷಣ ಹಾಗೂ ಇತರೆ ಅಗತ್ಯ ಕಾರ್ಯಗಳಿಗಾಗಿ ಸಂಚರಿಸುವವರಿಗೆ ಉತ್ತಮ ಸಂಪರ್ಕ ವ್ಯವಸ್ಥೆ ದೊರೆಯುವ ನಿರೀಕ್ಷೆಯಿದೆ.

ಈ ಸಂದರ್ಭದಲ್ಲಿ ಶಾಸಕ ಬಸನಗೌಡ ದದ್ದಲ್ ಮಾತನಾಡಿ, ಗ್ರಾಮೀಣ ಭಾಗದ ಜನರಿಗೆ ಗುಣಮಟ್ಟದ ರಸ್ತೆ, ಕುಡಿಯುವ ನೀರು, ಸಾರ್ವಜನಿಕ ಕಟ್ಟಡಗಳು ಸೇರಿದಂತೆ ಅಗತ್ಯ ಮೂಲಸೌಕರ್ಯ ಕಲ್ಪಿಸುವುದಕ್ಕೆ ಆದ್ಯತೆ ನೀಡಲಾಗುತ್ತಿದೆ ಎಂದರು. ಮಟಮಾರಿ ಗ್ರಾಮದ ರಸ್ತೆ ಕಾಮಗಾರಿ ಪೂರ್ಣಗೊಂಡ ಬಳಿಕ ಗ್ರಾಮದ ಸಂಪರ್ಕ ವ್ಯವಸ್ಥೆ ಮತ್ತಷ್ಟು ಬಲಗೊಳ್ಳುವುದರೊಂದಿಗೆ ಅಭಿವೃದ್ಧಿಗೂ ಹೊಸ ವೇಗ ದೊರೆಯಲಿದೆ ಎಂದು ತಿಳಿಸಿದರು.

ಜನರ ಅಗತ್ಯಗಳಿಗೆ ಸ್ಪಂದಿಸಿ ಕ್ಷೇತ್ರದ ವಿವಿಧ ಗ್ರಾಮಗಳಲ್ಲಿ 2ನೇ ಪುಟಕ್ಕೆ

# ಸೆ.17ರಿಂದ ಅನಿರ್ದಿಷ್ಟಾವಧಿ ಹೋರಾಟ: ವಿವಿಧ ಬೇಡಿಕೆಗಳ ಈಡೇರಿಕೆಗೆ ದಲಿತ ಸಂಘಟನೆಗಳ ಆಗ್ರಹ



ರಾಯಚೂರು: ಭೂಮಾನಂದ ಕೊಲೆ ಪ್ರಕರಣ ಹಾಗೂ ಅಶ್ವಿನಿ ಮತ್ತು ರಾಣೆಮ್ಮ ಅತ್ಯಾಚಾರ-ಕೊಲೆ ಪ್ರಕರಣಗಳನ್ನು ಸಮಗ್ರ ತನಿಖೆಗಾಗಿ ಸಿಐಡಿಗೆ ಒಪ್ಪಿಸುವುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಮುಂದಿಟ್ಟುಕೊಂಡು ಸೆ.17ರಿಂದ ರಾಯಚೂರಿನಲ್ಲಿ ಅನಿರ್ದಿಷ್ಟಾವಧಿ ಪ್ರತಿಭಟನಾ ಹೋರಾಟ ಆರಂಭಿಸಲಾಗುವುದು ಎಂದು ಜಿಲ್ಲಾ ದಲಿತ ಮತ್ತು ಪ್ರಗತಿಪರ ಸಂಘಟನೆಗಳ ಒಕ್ಕೂಟದ ಮುಖಂಡ ರವೀಂದ್ರನಾಥ ಪಟ್ಟಿ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸೆ.14ರಂದು ನಗರದ ಶ್ರೀ ಶ್ರೀ ಮಾದಾರ ಚೆನ್ನಯ್ಯ ಭವನದಲ್ಲಿ ನಡೆದ ಸಭೆಯಲ್ಲಿ ಜಿಲ್ಲೆಯ ದಲಿತ ಸಮುದಾಯ ಎದುರಿಸುತ್ತಿರುವ ಸಮಸ್ಯೆಗಳು, ಇತ್ತೀಚೆಗೆ ನಡೆದಿರುವ ಘಟನೆಗಳು ಹಾಗೂ ಮುಂದಿನ ಹೋರಾಟದ ರೂಪುರೇಷೆಗಳ ಕುರಿತು ಚರ್ಚಿಸಲಾಗಿದೆ. ಸಭೆಯ ನಿರ್ಣಯದಂತೆ ಸರ್ಕಾರದ ಗಮನ ಸೆಳೆಯಲು ಅನಿರ್ದಿಷ್ಟಾವಧಿ ಹೋರಾಟ ನಡೆಸಲು ತೀರ್ಮಾನಿಸಲಾಗಿದೆ ಎಂದರು.

ಭೂಮಾನಂದ ಕೊಲೆ ಪ್ರಕರಣದಲ್ಲಿ 8ನೇ ಆರೋಪಿಯಾಗಿರುವ ಭೀಮರಾಯ ನಾಯಕನನ್ನು ತಕ್ಷಣ ಬಂಧಿಸಬೇಕು. ಭೂಮಾನಂದ ಕೊಲೆ ಹಾಗೂ ಅಶ್ವಿನಿ ಮತ್ತು ರಾಣೆಮ್ಮ ಅತ್ಯಾಚಾರ-ಕೊಲೆ ಪ್ರಕರಣಗಳ ತನಿಖೆಯನ್ನು ಸಿಐಡಿಗೆ ವರ್ಗಾಯಿಸಿ, ನಿಷ್ಪಕ್ಷಪಾತ ಹಾಗೂ ಸಮಗ್ರ ತನಿಖೆ ನಡೆಸಬೇಕು ಎಂಬುದು ಒಕ್ಕೂಟದ ಪ್ರಮುಖ ಬೇಡಿಕೆಯಾಗಿದೆ 2ನೇ ಪುಟಕ್ಕೆ

# ಕಲ್ಯಾಣ ಕರ್ನಾಟಕದ ಸಮಗ್ರ ಅಭಿವೃದ್ಧಿಗೆ ಆಗ್ರಹಿಸಿ ಸೆ.17ರಂದು ಕಲಬುರಗಿಯಲ್ಲಿ ಸಂಕಲ್ಪ ಸಮಾವೇಶ



ರಾಯಚೂರು: ಕಲ್ಯಾಣ ಕರ್ನಾಟಕ ಭಾಗದಲ್ಲಿ ಮುಂದುವರಿದಿರುವ ಪ್ರಾದೇಶಿಕ ಅಸಮಾನತೆ ನಿವಾರಿಸಿ, ಶಿಕ್ಷಣ, ಆರೋಗ್ಯ, ಉದ್ಯೋಗ ಹಾಗೂ ನೀರಾವರಿ ಸೇರಿದಂತೆ ಪ್ರಮುಖ ಕ್ಷೇತ್ರಗಳ ಸಮಗ್ರ ಅಭಿವೃದ್ಧಿಗೆ ಒತ್ತಾಯಿಸಿ ಸೆ.17ರಂದು ಕಲಬುರಗಿಯಲ್ಲಿ ಪ್ರಾದೇಶಿಕ ಅಸಮತೋಲನ ನಿವಾರಣಾ ಸಂಕಲ್ಪ ಸಮಾವೇಶ ಆಯೋಜಿಸಲಾಗಿದೆ ಎಂದು ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಹೋರಾಟ ಸಮಿತಿ ಕೇಂದ್ರ ಸಮಿತಿಯ ಜಿಲ್ಲಾಧ್ಯಕ್ಷ ಆರ್. ಬಸವರಾಜ್ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹೈದರಾಬಾದ್ ಕರ್ನಾಟಕ ಪ್ರದೇಶ ಕರ್ನಾಟಕದೊಂದಿಗೆ ವಿಲೀನಗೊಂಡು 79 ವರ್ಷಗಳು ಕಳೆದಿದ್ದರೂ ಈ ಭಾಗದಲ್ಲಿನ ಪ್ರಾದೇಶಿಕ ಅಸಮಾನತೆ ನಿರೀಕ್ಷಿತ ಪ್ರಮಾಣದಲ್ಲಿ ಕಡಿಮೆಯಾಗಿಲ್ಲ. ಸಂವಿಧಾನದ ಕಲಂ 371(ಜೆ) ಜಾರಿಯಿಂದ ವಿಶೇಷ ಸೌಲಭ್ಯಗಳು ದೊರೆತಿದ್ದರೂ ಅಭಿವೃದ್ಧಿಯ ವಿಷಯದಲ್ಲಿ ಇನ್ನೂ ಹಲವು ಸಮಸ್ಯೆಗಳು ಉಳಿದುಕೊಂಡಿವೆ ಎಂದರು.

ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಗೆ ಕಳೆದ 12 ವರ್ಷಗಳಲ್ಲಿ ಸಾವಿರಾರು ಕೋಟಿ ರೂ. ಅನುದಾನ ಒದಗಿಸಿದ್ದರೂ ಶಿಕ್ಷಣ, ಆರೋಗ್ಯ ಮತ್ತು 2ನೇ ಪುಟಕ್ಕೆ

# ಶಿಕ್ಷಣ ಇಲಾಖೆ ಉಪನಿರ್ದೇಶಕರ ವಿರುದ್ಧ ಕ್ರಮಕ್ಕೆ ಒತ್ತಾಯ



ರಾಯಚೂರು: ವಿಚಾರಣೆಗೆ ಹಾಜರಾಗುವಂತೆ ಕರೆಸಿ ತಮ್ಮೊಂದಿಗೆ ಅನುಚಿತವಾಗಿ ವರ್ತಿಸಿ ಸಾರ್ವಜನಿಕವಾಗಿ ಅವಮಾನಿಸಲಾಗಿದೆ ಎಂದು ಆರೋಪಿಸಿರುವ ಸಾಮಾಜಿಕ ಕಾರ್ಯಕರ್ತ ಚನ್ನಬಸವ ಆರೋಲಿ, ಸಾರ್ವಜನಿಕ ಶಿಕ್ಷಣ ಇಲಾಖೆಯ ರಾಯಚೂರು ಉಪನಿರ್ದೇಶಕ ಜಿ. ಮಲ್ಲಿಕಾರ್ಜುನ ಅವರ ವಿರುದ್ಧ ಸಮಗ್ರ ತನಿಖೆ ನಡೆಸಿ ಶಿಸ್ತು ಕ್ರಮ ಕೈಗೊಳ್ಳುವುದರೊಂದಿಗೆ ಕರ್ತವ್ಯದಿಂದ ವಜಾಗೊಳಿಸಬೇಕು ಎಂದು ಸರ್ಕಾರವನ್ನು ಒತ್ತಾಯಿಸಿದರು.

ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಾನ್ವಿ ತಾಲೂಕಿನ ಆರೋಲಿ ಗ್ರಾಮದ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ನಡೆದಿದೆ ಎನ್ನಲಾದ ಅವ್ಯವಹಾರಗಳ ಕುರಿತು ಕಳೆದ ಎರಡು ವರ್ಷಗಳಿಂದ ಕ್ಷೇತ್ರ ಶಿಕ್ಷಣಾಧಿಕಾರಿ ಹಾಗೂ ಉಪನಿರ್ದೇಶಕರಿಗೆ ಹಲವು ಬಾರಿ ದೂರು ನೀಡಲಾಗಿದೆ. ಆದರೂ ದೂರುಗಳಿಗೆ ಸಂಬಂಧಿಸಿದಂತೆ ಸೂಕ್ತ ಕ್ರಮ ಕೈಗೊಂಡಿಲ್ಲ ಎಂದು ಆರೋಪಿಸಿದರು.

ಈ ವಿಷಯವನ್ನು 2ನೇ ಪುಟಕ್ಕೆ

# ಕೆ. ಶಾಂತಪ್ಪ ಅವರಿಗೆ ಛಲವಾದಿ ಮಹಾಸಭಾದಿಂದ ಗೌರವ ಸನ್ಮಾನ



ರಾಯಚೂರು: ರಾಯಚೂರು ಜಿಲ್ಲಾ ಕಾಂಗ್ರೆಸ್ ಪಕ್ಷದ ನೂತನ ಅಧ್ಯಕ್ಷರಾಗಿ ಆಯ್ಕೆಯಾಗಿರುವ ಹಿಂದುಳಿದ ವರ್ಗಗಳ ಜಿಲ್ಲಾಧ್ಯಕ್ಷ ಹಾಗೂ ಎಪಿಎಂಸಿ ಮಾಜಿ ಅಧ್ಯಕ್ಷ ಕೆ. ಶಾಂತಪ್ಪ ಅವರನ್ನು ಛಲವಾದಿ ಮಹಾಸಭಾ ಜಿಲ್ಲಾಸಮಿತಿ ವತಿಯಿಂದ ಗೌರವಪೂರ್ವಕವಾಗಿ ಸನ್ಮಾನಿಸಿ ಅಭಿನಂದಿಸಲಾಯಿತು.

ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರಾಗಿ ನೂತನ ಜವಾಬ್ದಾರಿ ವಹಿಸಿಕೊಂಡಿರುವ ಹಿನ್ನೆಲೆಯಲ್ಲಿ ಕೆ. ಶಾಂತಪ್ಪ ಅವರಿಗೆ ಶಾಲು ಹೊದಿಸಿ, ಹೂಮಾಲೆ ಹಾಕಿ ಸನ್ಮಾನಿಸಿದ ಛಲವಾದಿ ಮಹಾಸಭಾದ ಪದಾಧಿಕಾರಿಗಳು, ಅವರ ಮುಂದಿನ ರಾಜಕೀಯ ಹಾಗೂ ಸಂಘಟನಾ ಕಾರ್ಯಗಳಿಗೆ ಶುಭ ಹಾರೈಸಿದರು.

ಜಿಲ್ಲೆಯಲ್ಲಿ ಪಕ್ಷದ ಸಂಘಟನೆಯನ್ನು ಮತ್ತಷ್ಟು ಬಲಪಡಿಸುವುದರೊಂದಿಗೆ ಎಲ್ಲ ವರ್ಗದ ಜನರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಕಾರ್ಯನಿರ್ವಹಿಸಲಿ ಎಂದು 2ನೇ ಪುಟಕ್ಕೆ

# ಛಲವಾದಿ ಮಹಾಸಭಾದ ವಾರ್ಷಿಕ ಸರ್ವ ಸದಸ್ಯರ ಸಭೆ ಸೆ.20ರಂದು



ರಾಯಚೂರು: ದಿವಂಗತ ಶಿವರಾಂ ಅವರು ಸ್ಥಾಪಿಸಿದ ಛಲವಾದಿ ಮಹಾಸಭಾವು ರಾಜ್ಯಮಟ್ಟದಲ್ಲಿ ಸಂಘಟನೆಯನ್ನು ವಿಸ್ತರಿಸಿಕೊಂಡಿದ್ದು, ಪ್ರಸ್ತುತ 4,800ಕ್ಕೂ ಅಧಿಕ ಸದಸ್ಯರನ್ನು ಹೊಂದಿದೆ. ರಾಯಚೂರು ಜಿಲ್ಲೆಯಲ್ಲಿ ಸುಮಾರು 650 ಸದಸ್ಯರಿದ್ದು, ಮಹಾಸಭಾದ 2025-26ನೇ ಸಾಲಿನ ವಾರ್ಷಿಕ ಸರ್ವ ಸದಸ್ಯರ ಸಭೆಯನ್ನು ಸೆ.20ರಂದು ಬೆಂಗಳೂರಿನ ದೊಡ್ಡಬಸ್ತಿಯ ಛಲವಾದಿ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಮಹಾಸಭಾದ ರಾಜ್ಯ ನಿರ್ದೇಶಕ ವಸಂತ ಎಂ. ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಮಂಗಳವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯಾಧ್ಯಕ್ಷೆ ವಾಣಿ ಕೆ. ಶಿವರಾಮು ಅವರ ನೇತೃತ್ವದಲ್ಲಿ ವಾರ್ಷಿಕ ಸಭೆ ನಡೆಯಲಿದೆ. ಮಹಾಸಭಾ ಸ್ಥಾಪನೆಯಾದಾಗಿನಿಂದ ಛಲವಾದಿ ಸಮುದಾಯದ ಶೈಕ್ಷಣಿಕ, ಸಾಮಾಜಿಕ ಹಾಗೂ ಸಂಘಟನಾತ್ಮಕ ಏಳಿಗೆಗಾಗಿ ನಿರಂತರವಾಗಿ ಕಾರ್ಯನಿರ್ವಹಿಸುತ್ತಿದೆ ಎಂದರು.

ಮಹಾಸಭಾವು ಎರಡು ಎಕರೆ ಜಮೀನು ಹೊಂದಿದ್ದು, ಅಲ್ಲಿ ಸುಮಾರು ₹22 ಕೋಟಿ ವೆಚ್ಚದಲ್ಲಿ ಛಲವಾದಿ ಭವನ ಹಾಗೂ ಕೋಚಿಂಗ್ ಸೆಂಟರ್ ನಿರ್ಮಾಣ ಕಾರ್ಯ 2ನೇ ಪುಟಕ್ಕೆ

# ನಗರದ ವಿವಿಧ ವಾರ್ಡ್‌ಗಳಿಗೆ ಪಾಲಿಕೆ ಆಯುಕ್ತರ ದಿಢೀರ್ ಭೇಟಿ: ಅಭಿವೃದ್ಧಿ ಕಾಮಗಾರಿಗಳ ಪರಿಶೀಲನೆ




ರಾಯಚೂರು, ಸೆ.15: ರಾಯಚೂರು ಮಹಾನಗರ ಪಾಲಿಕೆ ಆಯುಕ್ತ ಜುಬಿನ್ ಮಹಾಪಾತ್ರ ಅವರು ನಗರದ ವಿವಿಧ ವಾರ್ಡ್‌ಗಳಿಗೆ ದಿಢೀರ್ ಭೇಟಿ ನೀಡಿ, ವಿಶೇಷ ಕಂದಾಯ ಉತ್ಸವದ ಪ್ರಗತಿ ಹಾಗೂ ವಿವಿಧ ಮೂಲಸೌಕರ್ಯ ಅಭಿವೃದ್ಧಿ ಕಾಮಗಾರಿಗಳನ್ನು ಪರಿಶೀಲಿಸಿದರು. ಪ್ರಗತಿಯಲ್ಲಿರುವ ಕಾಮಗಾರಿಗಳನ್ನು ಗುಣಮಟ್ಟ ಕಾಯ್ದುಕೊಂಡು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸುವಂತೆ ಅಧಿಕಾರಿಗಳು ಮತ್ತು ಗುತ್ತಿಗೆದಾರರಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ವಾರ್ಡ್ ಸಂಖ್ಯೆ 3 ಮತ್ತು 19ರಲ್ಲಿ ನಡೆಯುತ್ತಿರುವ ವಿಶೇಷ ಕಂದಾಯ ಉತ್ಸವಕ್ಕೆ ಭೇಟಿ ನೀಡಿದ ಆಯುಕ್ತರು, ಯೋಜನೆಯ ಅನುಷ್ಠಾನ ಹಾಗೂ ಸಾರ್ವಜನಿಕರಿಗೆ ಒದಗಿಸಲಾಗುತ್ತಿರುವ ಸೇವೆಗಳ ಕುರಿತು ಮಾಹಿತಿ ಪಡೆದರು. ಕಳೆದ ವಾರ ನಗರಾಭಿವೃದ್ಧಿ ಸಚಿವರಿಂದ ಉದ್ಘಾಟನೆಗೊಂಡ ಈ ಕಾರ್ಯಕ್ರಮವು ಮಹಾನಗರ ಪಾಲಿಕೆಯ ಎರಡನೇ ಹಂತದ ವಿಶೇಷ ಅಭಿಯಾನವಾಗಿದೆ.

ಕಳೆದ ವರ್ಷ ನಡೆಸಲಾಗಿದ್ದ ಕಂದಾಯ ಅದಾಲತ್ ಮೂಲಕ 4 ಸಾವಿರಕ್ಕೂ ಅಧಿಕ ಕಂದಾಯ ಖಾತಾ, ಮ್ಯುಟೇಷನ್ (ಹಕ್ಕು ಬದಲಾವಣೆ), ತೆರಿಗೆ ನವೀಕರಣ ಹಾಗೂ ತಿದ್ದುಪಡಿಗೆ ಸಂಬಂಧಿಸಿದ ಅರ್ಜಿಗಳನ್ನು ವಿಲೇವಾರಿ ಮಾಡಲಾಗಿತ್ತು. ಈ ಬಾರಿಯ ವಿಶೇಷ ಕಂದಾಯ ಉತ್ಸವದ ಮೂಲಕವೂ ಸಾರ್ವಜನಿಕರ ಕಂದಾಯ ಸಂಬಂಧಿತ ಸಮಸ್ಯೆಗಳಿಗೆ ತ್ವರಿತ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲಾಗುತ್ತಿದೆ. ಪರಿಶೀಲನೆ ವೇಳೆ ಆಯುಕ್ತರು ಸಾರ್ವಜನಿಕರೊಂದಿಗೆ ಸಂವಾದ ನಡೆಸಿ ಅವರ ಸಮಸ್ಯೆಗಳನ್ನು ಆಲಿಸಿದರು.

ಬಳಿಕ ವಾರ್ಡ್ 2ನೇ ಪುಟಕ್ಕೆ

# ಶ್ರೀಮಠದಲಿ ವಿನಾಯಕ ಪೂಜೆ ನೆರವೇರಿಸಿದ ಸುಬುಧೇಂದ್ರ ತೀರ್ಥರು

(ತುಂಗಬಿಂಬ)

ಮಂತ್ರಾಲಯ: ಶ್ರೀಗಣೇಶ ಚತುರ್ಥಿಯ ಪವಿತ್ರ ಹಾಗೂ ಶುಭ ಸಂದರ್ಭದಲ್ಲಿ ಮಂತ್ರಾಲಯದ ಶ್ರೀ ರಾಘವೇಂದ್ರ ಸ್ವಾಮಿ ಮಠದಲ್ಲಿ ಶ್ರೀ ವಿನಾಯಕ ದೇವರಿಗೆ ವಿಶೇಷ ಪೂಜೆ ಸಲ್ಲಿಸಲಾಯಿತು. ಶ್ರೀಮಠದ ಪೀಠಾಧಿಪತಿಗಳಾದ ಪರಮಪೂಜ್ಯ ಶ್ರೀ ಸುಬುಧೇಂದ್ರ ತೀರ್ಥ ಸ್ವಾಮೀಜಿಯವರು ಶ್ರೀ ವಿನಾಯಕ ಪೂಜೆಯನ್ನು ಭಕ್ತಿಭಾವದಿಂದ ನೆರವೇರಿಸಿ, ಸಮಸ್ತ ಭಕ್ತರ ಒಳಿತು, ಸುಖ-ಶಾಂತಿ ಹಾಗೂ ಸಮೃದ್ಧಿಗಾಗಿ ಪ್ರಾರ್ಥಿಸಿದರು.



ಗಣೇಶ ಚತುರ್ಥಿ ಅಂಗವಾಗಿ ಶ್ರೀಮಠದಲ್ಲಿ ವಿಶೇಷ ಧಾರ್ಮಿಕ ವಾತಾವರಣ ನಿರ್ಮಾಣವಾಗಿದ್ದು, ಶ್ರೀ ಸುಬುಧೇಂದ್ರ ತೀರ್ಥರು ವಿಘ್ನನಿವಾರಕನಾದ ಶ್ರೀ ಗಣೇಶನಿಗೆ ಪೂಜೆ ಸಲ್ಲಿಸಿ ಮಂಗಳಾರತಿ ನೆರವೇರಿಸಿದರು. ಲೋಕಕಲ್ಯಾಣದೊಂದಿಗೆ ಭಕ್ತರ ಜೀವನದಲ್ಲಿ ಎದುರಾಗುವ ವಿಘ್ನಗಳು ನಿವಾರಣೆಯಾಗಿ, ಎಲ್ಲರಿಗೂ ಆರೋಗ್ಯ, ನೆಮ್ಮದಿ ಮತ್ತು ಸಮೃದ್ಧಿ ದೊರೆಯಲಿ ಎಂದು ಶ್ರೀ ವಿನಾಯಕನಲ್ಲಿ ಪ್ರಾರ್ಥಿಸಿದರು.

ಶ್ರೀ ರಾಘವೇಂದ್ರ ಸ್ವಾಮಿಗಳ ಸನ್ನಿಧಾನದಿಂದ ಪ್ರಸಿದ್ಧವಾಗಿರುವ ಮಂತ್ರಾಲಯದಲ್ಲಿ ಗಣೇಶ ಚತುರ್ಥಿಯ ಆಚರಣೆ ಮತ್ತಷ್ಟು ಧಾರ್ಮಿಕ ಮೆರುಗು ಪಡೆದುಕೊಂಡಿತು. ಶ್ರೀ ವಿನಾಯಕನ ಆರಾಧನೆಯೊಂದಿಗೆ ಹಬ್ಬವನ್ನು ಶ್ರದ್ಧಾ-ಭಕ್ತಿಯಿಂದ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಶ್ರೀಮಠದ ಭಕ್ತರು ಶ್ರೀ ವಿನಾಯಕ ದೇವರ ದರ್ಶನ ಪಡೆದು ಪುನೀತರಾದರು. ಗಣೇಶ ಚತುರ್ಥಿಯು ಪ್ರತಿಯೊಬ್ಬರ ಬದುಕಿನಲ್ಲಿ ಶುಭ, ಶಾಂತಿ, ಸಂತೋಷ ಮತ್ತು ಸಮೃದ್ಧಿಯನ್ನು ತರಲಿ ಎಂಬ ಆಶಯದೊಂದಿಗೆ ಶ್ರೀ ಸುಬುಧೇಂದ್ರ ತೀರ್ಥ ಸ್ವಾಮೀಜಿಯವರು ಸಮಸ್ತ ಭಕ್ತರಿಗೆ ಆಶೀರ್ವದಿಸಿದರು.

# ಎಲ್.ಪಿ.ಜಿ ರೀಫಿಲ್ ಬುಕ್ಕಿಂಗ್ ಅಂತರ ಪರಿಷ್ಕರಣೆ: ಜಿಲ್ಲಾಧಿಕಾರಿ ಪೂವಿತಾ ಎಸ್.



ರಾಯಚೂರು ಸೆ. 15 (ಕರ್ನಾಟಕ ವಾರ್ತೆ): ಜಿಲ್ಲೆಯ ಎಲ್ಲಾ ಗೃಹ ಬಳಕೆ ಅಡುಗೆ ಅನಿಲ ಗ್ರಾಹಕರಿಗೆ ತಿಳಿಸುವುದೇನೆಂದರೆ ಈ ಹಿಂದೆ ಮಧ್ಯಪ್ರಾಚ್ಯದಲ್ಲಿ ಉಂಟಾದ ಸಂಘರ್ಷದ ಹಿನ್ನೆಲೆಯಲ್ಲಿ ಎಲ್.ಪಿ.ಜಿ ಪೂರೈಕೆಯಲ್ಲಿ ವ್ಯತ್ಯಯವಾಗದಂತೆ ತಾತ್ಕಾಲಿಕ ಬೇಡಿಕೆ ನಿರ್ವಹಣಾ ಕ್ರಮವಾಗಿ ನಗರ ಪ್ರದೇಶದಲ್ಲಿ 25 ದಿನಗಳು ಮತ್ತು ಗ್ರಾಮೀಣ ಪ್ರದೇಶದಲ್ಲಿ 45 ದಿನಗಳ ಅಂತರವನ್ನು ನಿಗದಿಪಡಿಸಲಾಗಿತ್ತು. ಪ್ರಸ್ತುತ ಕೇಂದ್ರ ಸರ್ಕಾರವು ಎಲ್.ಪಿ.ಜಿ ಪೂರೈಕೆ ಪರಿಸ್ಥಿತಿ ಸುಧಾರಿಸಿರುವುದರಿಂದ ಮತ್ತು ರೀಫಿಲ್ ಬಾಕಿ ಗಣನೀಯವಾಗಿ ಕಡಿಮೆಯಾಗಿರುವುದರಿಂದ ಎಲ್.ಪಿ.ಜಿ ರೀಫಿಲ್ ಬುಕ್ಕಿಂಗ್ ಅಂತರವನ್ನು ಪರಿಷ್ಕರಿಸಿ ಆದೇಶಿಸಿದೆ ಎಂದು ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್.ಅವರು ತಿಳಿಸಿದ್ದಾರೆ.

ರಾಯಚೂರು ಜಿಲ್ಲೆಯ ಎಲ್ಲಾ ಗ್ರಾಮೀಣ ಮತ್ತು ನಗರ ಪ್ರದೇಶದ ಎಲ್ಲಾ ಎಲ್.ಪಿ.ಜಿ ಗ್ರಾಹಕರಿಗೆ ಏಕರೂಪವಾಗಿ 25 ದಿನಗಳ ಅಂತರದಲ್ಲಿ ರೀಫಿಲ್ ಬುಕ್ಕಿಂಗ್ ಮಾಡಲು ಅವಕಾಶ ಕಲ್ಪಿಸಲಾಗಿದ್ದು, ಈ ಸೌಲಭ್ಯವನ್ನು ಸದುಪಯೋಗ ಪಡೆದುಕೊಳ್ಳಬೇಕೆಂದು ಹಾಗೂ ತಮ್ಮ ಎಲ್.ಪಿ.ಜಿ ವಿತರಕರಲ್ಲಿ 25 ದಿನಗಳ ನಂತರ ರೀಫಿಲ್ ಬುಕ್ಕಿಂಗ್ ಮಾಡಬಹುದೆಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಿಲ್ಲಾಡಳಿತದಿಂದ ಸೆ.17 ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆ

ರಾಯಚೂರು ಸೆ. 15 (ಕರ್ನಾಟಕ ವಾರ್ತೆ): ರಾಯಚೂರಿನ ಜಿಲ್ಲಾಡಳಿತದಿಂದ ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆ-2026ರ ಅಂಗವಾಗಿ ರಾಷ್ಟ್ರ ಧ್ವಜಾರೋಹಣ ಕಾರ್ಯಕ್ರಮವನ್ನು ಸೆಪ್ಟಂಬರ್ 17ರ ಬೆಳಿಗ್ಗೆ 9ಕ್ಕೆ ನಗರದ ಮಹಾತ್ಮ ಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಅಜಯ್ ಧರ್ಮಸಿಂಗ್ ಅವರು ನೆರವೇರಿಸುವರು.

ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷರು ಆಗಿರುವ ಬೀಳಗಿ ಕ್ಷೇತ್ರದ ಶಾಸಕರಾದ ಜೆ.ಟಿ.ಪಾಟೀಲ್ ಅವರು ಘನ ಉಪಸ್ಥಿತಿ ವಹಿಸುವರು.

ನಗರ ಕ್ಷೇತ್ರದ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ್ ಅವರು ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ಲಿಂಗಸಗೂರು ಕ್ಷೇತ್ರದ ಶಾಸಕರಾದ ಮಾನಪ್ಪ ಡಿ.ವಜ್ಜಲ್, ದೇವದುರ್ಗ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ.ನಾಯಕ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ.ನಮೋಷಿ, ವಿಧಾನ ಪರಿಷತ್ ಶಾಸಕರಾದ ಚಂದ್ರಶೇಖರ್ ಬಿ.ಪಾಟೀಲ್, ವಿಧಾನ ಪರಿಷತ್ ಶಾಸಕರಾದ ಶರಣಗೌಡ ಪಾಟೀಲ ಬಯ್ಯಾಪುರ, ಎನ್.ಎಸ್ .ಬೋಸರಾಜು, ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ, ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಮಾನ್ಯ ಮುಖ್ಯಮಂತ್ರಿಗಳ ಕಾರ್ಯದರ್ಶಿಗಳು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ಎಸ್.ಎಸ್.ನಕುಲ್, ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ್, ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಶು ಗಿರಿ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಸೇರಿದಂತೆ ಇತರರು ಬಾಗಿಯಾಗಲಿದ್ದಾರೆ ಎಂದು ಜಿಲ್ಲಾಡಳಿತದ ಪ್ರಕಟಣೆ ತಿಳಿಸಿದೆ.

# ಶಿಕ್ಷಣ ಇಲಾಖೆ ಉಪನಿರ್ದೇಶಕರ ವಿರುದ್ಧ ಕ್ರಮಕ್ಕೆ ಒತ್ತಾಯ

ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಗಮನಕ್ಕೆ ತಂದ ಬಳಿಕ ವಿಚಾರಣೆಗೆ ಹಾಜರಾಗುವಂತೆ ಸೂಚಿಸಲಾಗಿತ್ತು. ಅದರಂತೆ ಸೆ.12ರಂದು ಶಾಲೆಯಲ್ಲಿ ನಡೆದ ವಿಚಾರಣೆಗೆ ತಾವು ಹಾಜರಾಗಿದ್ದ ಸಂದರ್ಭದಲ್ಲಿ ಪ್ರಕರಣಕ್ಕೆ ಸಂಬಂಧವಿಲ್ಲದ ವ್ಯಕ್ತಿಗಳನ್ನು ಅಲ್ಲಿಗೆ ಕರೆಸಲಾಗಿತ್ತು. ಅಲ್ಲದೆ, ತಮ್ಮೊಂದಿಗೆ ಏಕವಚನದಲ್ಲಿ ಮಾತನಾಡಿ, ಅವಾಚ್ಯ ಪದಗಳನ್ನು ಬಳಸಿ ಅವಮಾನಿಸಲಾಗಿದೆ ಎಂದು ಚನ್ನಬಸವ ಆರೋಲಿ ಆರೋಪಿಸಿದರು.

ವಿಚಾರಣೆ ಸಂದರ್ಭದಲ್ಲಿ ನಡೆದ ಘಟನೆಗೆ ಸಂಬಂಧಿಸಿದ ವಿಡಿಯೋ ತುಣುಕುಗಳು ತಮ್ಮ ಬಳಿ ಲಭ್ಯವಿದ್ದು, ಅಗತ್ಯವಿದ್ದಲ್ಲಿ ಸಂಬಂಧಪಟ್ಟ ಮೇಲಧಿಕಾರಿಗಳಿಗೆ ಅವುಗಳನ್ನು ಸಲ್ಲಿಸಲು ಸಿದ್ಧವಿರುವುದಾಗಿ ತಿಳಿಸಿದರು.

ದೂರು ನೀಡಿದ ವ್ಯಕ್ತಿಯೊಂದಿಗೆ ಅಧಿಕಾರಿಗಳು ನಡೆದುಕೊಂಡಿರುವ ರೀತಿಯ ಕುರಿತು ಉನ್ನತ ಮಟ್ಟದಲ್ಲಿ ಪರಿಶೀಲನೆ ನಡೆಸಬೇಕು. ತನಿಖೆಯಲ್ಲಿ ಅಧಿಕಾರಿ ತಪ್ಪಿತಸ್ಥರೆಂದು ಕಂಡುಬಂದಲ್ಲಿ ಕಠಿಣ ಶಿಸ್ತು ಕ್ರಮ ಜರುಗಿಸಬೇಕು ಎಂದು ಆಗ್ರಹಿಸಿದರು.

ಇದರೊಂದಿಗೆ ಆರೋಲಿ ಗ್ರಾಮದ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ನಡೆದಿದೆ ಎನ್ನಲಾದ ಅವ್ಯವಹಾರಗಳ ಬಗ್ಗೆಯೂ ನಿಷ್ಪಕ್ಷಪಾತ ತನಿಖೆ ನಡೆಸಬೇಕು. ಶಾಲೆಯಲ್ಲಿನ ಸಮಸ್ಯೆಗಳನ್ನು ಪರಿಹರಿಸಿ, ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಅಗತ್ಯ ಮೂಲಸೌಕರ್ಯ ಹಾಗೂ ಸೌಲಭ್ಯಗಳನ್ನು ಒದಗಿಸಲು ಸಂಬಂಧಪಟ್ಟ ಇಲಾಖೆ ಕ್ರಮ ಕೈಗೊಳ್ಳಬೇಕು ಎಂದು ಚನ್ನಬಸವ ಆರೋಲಿ ಒತ್ತಾಯಿಸಿದರು.

# ಕೆ. ಶಾಂತಪ್ಪ ಅವರಿಗೆ ಛಲವಾದಿ ಮಹಾಸಭಾದಿಂದ ಗೌರವ ಸನ್ಮಾನ

ಮುಖಂಡರು ಆಶಿಸಿದರು. ಇದೇ ವೇಳೆ ಕೆ. ಶಾಂತಪ್ಪ ಅವರೊಂದಿಗೆ ವಿವಿಧ ಸಾಮಾಜಿಕ ಹಾಗೂ ಸಂಘಟನಾ ವಿಷಯಗಳ ಕುರಿತು ಮುಖಂಡರು ಚರ್ಚಿಸಿದರು.

ಈ ಸಂದರ್ಭದಲ್ಲಿ ಛಲವಾದಿ ಮಹಾಸಭಾದ ರಾಜ್ಯ ನಿರ್ದೇಶಕ ಎಂ. ವಸಂತ್, ಜಿಲ್ಲಾಧ್ಯಕ್ಷ ವಿಶ್ವನಾಥ್ ಪಟ್ಟಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ವಕೀಲ ತಮ್ಮಣ್ಣ, ಬಾಬು ಬಾಜಿ, ಜಿಲ್ಲಾ ಉಪಾಧ್ಯಕ್ಷ ಪುಷ್ಪರಾಜ್, ಮಂಗಳಾರಪೇಟೆ ಕಂದಾಯ ಇಲಾಖೆಯ ನರಸಿಂಹಲು, ಸುರೇಶ್ ಪಟ್ಟಿ, ರಾಘವೇಂದ್ರ ಐಟಿಐ, ವಕೀಲ ರಾಮಪ್ಪ ಶಾಖವಾದಿ, ವಿಜಯ್ ಪ್ರಸಾದ್, ಚಿನ್ನ ರಾಯುಡು, ಪಾರ್ಥಸಾರಥಿ, ಶಿವು ಹನುಮಪ್ಪುರ್, ಅರವಿಂದ್ ಪಟ್ಟಿ, ಹರೀಶ್ ಬಾಬು, ಕಿಶೋರ್ ಗೋಲ್ ಮಾರ್ಕೆಟ್, ಗಂಗಾಧರ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಛಲವಾದಿ ಮಹಾಸಭಾದ ವಾರ್ಷಿಕ ಸರ್ವ ಸದಸ್ಯರ ಸಭೆ ಸೆ.20ರಂದು

ಪ್ರಗತಿಯಲ್ಲಿದೆ. ಕಾಮಗಾರಿಯನ್ನು ಶೀಘ್ರ ಪೂರ್ಣಗೊಳಿಸಿ ಸಮುದಾಯದ ಬಳಕೆಗೆ ಒದಗಿಸುವ ನಿಟ್ಟಿನಲ್ಲಿ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ಹೇಳಿದರು.

ಸೆ.20ರಂದು ನಡೆಯುವ ವಾರ್ಷಿಕ ಸರ್ವ ಸದಸ್ಯರ ಸಭೆಯಲ್ಲಿ ಸಂಘಟನೆಯ ಚಟುವಟಿಕೆಗಳು ಹಾಗೂ ಮುಂದಿನ ಕಾರ್ಯಯೋಜನೆಗಳ ಕುರಿತು ಚರ್ಚಿಸಲಾಗುವುದು. ರಾಯಚೂರು ಜಿಲ್ಲೆಯ ಎಲ್ಲ ಸದಸ್ಯರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಸಭೆಯನ್ನು ಯಶಸ್ವಿಗೊಳಿಸಬೇಕು ಎಂದು ವಸಂತ ಎಂ. ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಜಿಲ್ಲಾಧ್ಯಕ್ಷ ವಿಶ್ವನಾಥ್ ಪಟ್ಟಿ, ತಿಮ್ಮಣ್ಣ, ಪುಷ್ಪರಾಜ್, ಪಾರ್ಥಸಾರಥಿ, ಬಾಬು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ನಗರದ ವಿವಿಧ ವಾರ್ಡ್‌ಗಳಿಗೆ ಪಾಲಿಕೆ ಆಯುಕ್ತರ ದಿಢೀರ್ ಭೇಟಿ: ಅಭಿವೃದ್ಧಿ ಕಾಮಗಾರಿಗಳ ಪರಿಶೀಲನೆ

ಸಂಖ್ಯೆ 14 ಮತ್ತು 12ರ ವ್ಯಾಪ್ತಿಯ ಅಶೋಕ್ ಡಿಪೋ ಪ್ರದೇಶಕ್ಕೆ ಭೇಟಿ ನೀಡಿ, 14 ಇಂಚಿನ ಆರ್‌ಸಿಸಿ ಪೈಪ್ ಲೈನ್‌ನ ಸ್ಥಿತಿಗತಿ ಹಾಗೂ ದುರಸ್ತಿ ಕಾಮಗಾರಿಯನ್ನು ಪರಿಶೀಲಿಸಿದರು. ಈ ಪೈಪ್‌ಲೈನ್‌ನಿಂದ ಪದೇ ಪದೇ ನೀರು ಕಲುಷಿತಗೊಳ್ಳುತ್ತಿರುವ ಹಿನ್ನೆಲೆಯಲ್ಲಿ ಕೈಗೊಂಡಿರುವ ಕಾಮಗಾರಿಯ ಪ್ರಗತಿ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದರು.

ನಗರದಲ್ಲಿರುವ ಅಪಾಯಕಾರಿ ಪೈಪ್‌ಲೈನ್‌ಗಳನ್ನು ಬದಲಾಯಿಸಲು ಮಹಾನಗರ ಪಾಲಿಕೆಯಿಂದ ₹4 ಕೋಟಿ ವೆಚ್ಚದ ಕಾಮಗಾರಿ ಕೈಗೆತ್ತಿಕೊಳ್ಳಲಾಗಿದೆ. ಸಾರ್ವಜನಿಕರಿಗೆ ಶುದ್ಧ ಕುಡಿಯುವ ನೀರು ಪೂರೈಕೆಯಾಗುವುದನ್ನು ಖಚಿತಪಡಿಸಿಕೊಳ್ಳುವ ನಿಟ್ಟಿನಲ್ಲಿ ಪೈಪ್‌ಲೈನ್ ಕಾಮಗಾರಿಯನ್ನು ವಿಳಂಬವಿಲ್ಲದೆ, ಗುಣಮಟ್ಟದಿಂದ ಪೂರ್ಣಗೊಳಿಸುವಂತೆ ಸಂಬಂಧಪಟ್ಟ ಅಧಿಕಾರಿಗಳು ಹಾಗೂ ಗುತ್ತಿಗೆದಾರರಿಗೆ ಆಯುಕ್ತರು ನಿರ್ದೇಶನ ನೀಡಿದರು.

ನಗರದಲ್ಲಿ ಕಾರ್ಯನಿರ್ವಹಿಸದ 20 ಸಾರ್ವಜನಿಕ ಶೌಚಾಲಯಗಳನ್ನು ಗುರುತಿಸಲಾಗಿದ್ದು, ಮಹಾನಗರ ಪಾಲಿಕೆಯ ಸಾಮಾನ್ಯ ನಿಧಿಯಡಿ ಅವುಗಳ ದುರಸ್ತಿ ಹಾಗೂ ನವೀಕರಣಕ್ಕೆ ಉದ್ದೇಶಿಸಲಾಗಿದೆ. ಸಾರ್ವಜನಿಕ ಆರೋಗ್ಯದ ಮೇಲಿನ ಅಪಾಯವನ್ನು ತಗ್ಗಿಸುವುದು, ಸ್ವಚ್ಛತೆ ಸುಧಾರಿಸುವುದು ಹಾಗೂ ಬಯಲು ಶೌಚ ತಡೆಗಟ್ಟುವ ಉದ್ದೇಶದಿಂದ ಶೌಚಾಲಯಗಳಲ್ಲಿ ಅಗತ್ಯ ಮೂಲಸೌಕರ್ಯ ಕಲ್ಪಿಸಿ ಸಾರ್ವಜನಿಕ ಬಳಕೆಗೆ ಯೋಗ್ಯಗೊಳಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ನಂತರ ಮಹಿಳಾ ಸಮಾಜದ ತೆರೆದ ಸಭಾಂಗಣಕ್ಕೆ ಮಳೆ ಹಾಗೂ ಹವಾಮಾನ ವೈಪರೀತ್ಯಗಳಿಂದ ರಕ್ಷಣೆ ಒದಗಿಸಲು ಉದ್ದೇಶಿಸಿರುವ ಟೆನ್ಸೈಲ್ ರೂಫಿಂಗ್ ಹಾಗೂ ಗ್ಯಾಲರಿ ನಿರ್ಮಾಣ ಕಾಮಗಾರಿಯ ಸ್ಥಳವನ್ನು ಪರಿಶೀಲಿಸಿದರು. ಎಸ್‌ಎಫ್‌ಸಿ ನಿಧಿಯ ಉಳಿತಾಯ ಮೊತ್ತದಿಂದ ಅಂದಾಜು ₹73 ಲಕ್ಷ ವೆಚ್ಚದಲ್ಲಿ ಈ ಕಾಮಗಾರಿ ಕೈಗೊಳ್ಳಲು ಪ್ರಸ್ತಾಪಿಸಲಾಗಿದೆ.

ಸ್ಥಳ ಪರಿಶೀಲನೆ ವೇಳೆ ಕಾಮಗಾರಿಯ ವಿನ್ಯಾಸ, ಗುಣಮಟ್ಟ ಹಾಗೂ ಸಾರ್ವಜನಿಕ ಸುರಕ್ಷತೆಗೆ ಆದ್ಯತೆ ನೀಡಬೇಕು. ನಿಗದಿತ ಮಾನದಂಡಗಳನ್ನು ಪಾಲಿಸುವುದರೊಂದಿಗೆ ಕಾಮಗಾರಿ ಅನುಷ್ಠಾನದಲ್ಲಿ ಯಾವುದೇ ಅನಗತ್ಯ ವಿಳಂಬವಾಗದಂತೆ ಕ್ರಮ ವಹಿಸಿ, ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಬೇಕು ಎಂದು ಆಯುಕ್ತ ಜುಬಿನ್ ಮಹಾಪಾತ್ರ ಅಧಿಕಾರಿಗಳಿಗೆ ಸೂಚಿಸಿದರು.

ಪರಿಶೀಲನೆ ಸಂದರ್ಭದಲ್ಲಿ ಮಹಾನಗರ ಪಾಲಿಕೆಯ ಸಂಬಂಧಪಟ್ಟ ಅಧಿಕಾರಿಗಳು, ಗುತ್ತಿಗೆದಾರರು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

# ಆರೋಗ್ಯ ಇಲಾಖೆಯಿಂದ ವಿವಿಧ ಹುದ್ದೆಗೆ ಅರ್ಜಿ ಆಹ್ವಾನ

ರಾಯಚೂರು ಸೆ. 15 (ಕರ್ನಾಟಕ ವಾರ್ತೆ): ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ವತಿಯಿಂದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಾರ್ಯಲಯದಡಿಯಲ್ಲಿ 2026-27ನೇ ಸಾಲಿಗೆ ರಾಯಚೂರು ಜಿಲ್ಲೆಯ ದೇವದುರ್ಗ, ಸಿಂಧನೂರು, ಮಾನವಿ, ಮಸ್ಕಿ, ಸಿರವಾರ ಹಾಗೂ ಮುದುಗಲ್ ತಾಲೂಕುಗಳಲ್ಲಿ ಮನೋರೋಗ ತಜ್ಞರ 06, ಸಾಮಾಜಿಕ ಕಾರ್ಯಕರ್ತೆಯರು 06 ಹುದ್ದೆಗಳಿಗೆ ಒಳ ಗುತ್ತಿಗೆ ಆಧಾರದ ಮೇಲೆ ನೇಮಕಾತಿಗೆ ಆಸಕ್ತರಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು ಮನೋರೋಗ ತಜ್ಞರ ಹುದ್ದೆಗಳಿಗೆ ಎಂ.ಬಿ.ಬಿ.ಎಸ್ ಎಂ.ಡಿ ಸೈಕ್ಯಾಟ್ರೀಸ್ಟ್ ಆಗಿರಬೇಕು. ಮತ್ತು ಸಾಮಾಜಿಕ ಕಾರ್ಯಕರ್ತೆಯರು-06 ಹುದ್ದೆಗಳಿಗೆ ಎಂ.ಎಸ್.ಡಬ್ಲೂ ಮೆಡಿಕಲ್ ಮತ್ತು ಸೈಕ್ಯಾಟ್ರಿಕ್ ಸೋಶಿಯಲ್ ವರ್ಕರ್ ಸ್ನಾತಕೊತ್ತರ ಪದವಿ ಆಗಿರಬೇಕು. ಮತ್ತು ಆರ್.ಸಿ.ಐ ಇಂದ ಅನುಮತಿಯಾಗಿರುವ ಪ್ರಮಾಣ ಪತ್ರ ಇರಬೇಕು. (ಸೂಕ್ತ ವಿದ್ಯಾರ್ಹತೆ ಮತ್ತು ಅನುಭವ ಆಧಾರಿತ) ಅರ್ಜಿದಾರರು ಸ್ವ-ಹಸ್ತಾಕ್ಷರದಿಂದ ಭರ್ತಿಮಾಡಿ ಹುದ್ದೆಗೆ ಸಂಬದಿಸಿದ ಎಲ್ಲಾ ದೃಡೀಕೃತ ದಾಖಲಾತಿಗಳು ಹಾಗೂ ಭಾವಚಿತ್ರದೊಂದಿಗೆ ಸೆಪ್ಟಂಬರ್ 23ರ ಸಂಜೆ 5.30 ಒಳಗಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿ, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಲಯ ವಿಭಾಗ ರಾಯಚೂರು ಇಲ್ಲಿಗೆ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 8151896578ಗೆ ಸಂಪರ್ಕಿಸುವತೆ ಅಥವಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಲಯ ವಿಭಾಗಕ್ಕೆ ಸಂಪರ್ಕ ಮಾಡಬಹುದಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಮೃತ ವಾಣಿ

ಸತ್ಯ ಎನ್ನುವುದು ಸಿಂಹದಂತೆ
ನೀವು ರಕ್ಷಿಸಬೇಕಾಗಿಲ್ಲ
ಅದು ತನ್ನನ್ನು ತಾನು
ರಕ್ಷಿಸಿಕೊಳ್ಳುತ್ತದೆ.

## 1587 ನೆಯ ದಿನಕ್ಕೆ ಏಮ್ಸ್ ಹೋರಾಟ

# ಮೊದಲನೇ ಪುಟದಿಂದ

# UPI ಬದಲಾವಣೆ: ₹2,000 ಮೇಲ್ಪಟ್ಟ ಆಯ್ದ ವ್ಯಾಪಾರಿ ವಹಿವಾಟಿಗೆ ಶೇ.0.4 MDR

ವಿಧಿಸುವ UPI transaction fee ಅಲ್ಲ. ಕೇಂದ್ರ ಸರ್ಕಾರವೂ ಆಗಸ್ಟ್‌ನಲ್ಲಿ UPI ಬಳಕೆದಾರರಿಗೆ ಯಾವುದೇ ವಹಿವಾಟು ಶುಲ್ಕ ವಿಧಿಸಲಾಗುವುದಿಲ್ಲ ಹಾಗೂ ಎಲ್ಲ P2P ವಹಿವಾಟುಗಳು ಉಚಿತವಾಗಿಯೇ ಮುಂದುವರಿಯಲಿವೆ ಎಂದು ಸ್ಪಷ್ಟಪಡಿಸಿತ್ತು. MDR ಜಾರಿಯಾದರೂ ಅದು ಸೀಮಿತ ಸಂಖ್ಯೆಯ ವ್ಯಾಪಾರಿ ವಹಿವಾಟುಗಳಿಗೆ ಮಾತ್ರ ಅನ್ವಯವಾಗಲಿದೆ ಎಂದು ಸರ್ಕಾರ ತಿಳಿಸಿತ್ತು.

UPI ಪಾವತಿ ವ್ಯವಸ್ಥೆಯನ್ನು ದೀರ್ಘಾವಧಿಯಲ್ಲಿ ಸುಸ್ಥಿರವಾಗಿಡುವುದು, ಡಿಜಿಟಲ್ ಪಾವತಿ ಮೂಲಸೌಕರ್ಯ, ಸೈಬರ್ ಭದ್ರತೆ, ತಾಂತ್ರಿಕ ಆವಿಷ್ಕಾರ ಮತ್ತು ಗ್ರಾಹಕ ಸೇವೆಯಲ್ಲಿ ಹೆಚ್ಚಿನ ಹೂಡಿಕೆಗೆ ಅವಕಾಶ ಕಲ್ಪಿಸುವುದು ಹೊಸ MDR ವ್ಯವಸ್ಥೆಯ ಉದ್ದೇಶವಾಗಿದೆ ಎಂದು ವರದಿಗಳು ತಿಳಿಸಿವೆ.

ಫ್ಯಾಕ್ಟ್ ಚೆಕ್: ಮೂಲ ಮಾಹಿತಿಯಲ್ಲಿದ್ದ "ವ್ಯಕ್ತಿಯಿಂದ ವ್ಯಕ್ತಿಗೆ UPI ವಹಿವಾಟುಗಳಿಗೆ MDR" ಎಂಬ ಉಲ್ಲೇಖ ಸರಿಯಲ್ಲ. ಹೊಸ MDR P2P ವಹಿವಾಟುಗಳಿಗೆ ಅನ್ವಯಿಸುವುದಿಲ್ಲ; ಅದು ₹2,000 ಮೇಲ್ಪಟ್ಟ ಆಯ್ದ P2M ವ್ಯಾಪಾರಿ ವಹಿವಾಟುಗಳಿಗೆ ಮಾತ್ರ ಅನ್ವಯಿಸುತ್ತದೆ. ಗ್ರಾಹಕರಿಂದ ಈ MDR ಶುಲ್ಕವನ್ನು ವಸೂಲಿಸುವುದಿಲ್ಲ.

# ಕುರ್ಡಿ ಗ್ರಾಮದಲ್ಲಿ ₹25 ಲಕ್ಷ ವೆಚ್ಚದ ಸಮುದಾಯ ಭವನ ಉದ್ಘಾಟನೆ: ಶಾಸಕ ಬಸನಗೌಡ ದದ್ದಲ್

ಅನುಕೂಲವಾಗುವಂತಹ ಅಭಿವೃದ್ಧಿ ಕಾಮಗಾರಿಗಳಿಗೆ ಆದ್ಯತೆ ನೀಡಲಾಗುತ್ತಿದ್ದು, ಕ್ಷೇತ್ರದ ವಿವಿಧ ಗ್ರಾಮಗಳಲ್ಲಿ ಅಗತ್ಯಕ್ಕೆ ಅನುಗುಣವಾಗಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಕೆಕೆಆರ್‌ಡಿಬಿ ಅನುದಾನವನ್ನು ಸಮರ್ಪಕವಾಗಿ ಬಳಸಿಕೊಂಡು ಗ್ರಾಮೀಣ ಭಾಗದಲ್ಲಿ ಅಗತ್ಯ ಮೂಲಸೌಕರ್ಯಗಳನ್ನು ಕಲ್ಪಿಸುವ ಮೂಲಕ ಜನರಿಗೆ ಅನುಕೂಲ ಮಾಡಿಕೊಡುವುದು ಉದ್ದೇಶವಾಗಿದೆ. ಸಮುದಾಯ ಭವನವನ್ನು ಗ್ರಾಮಸ್ಥರು ಉತ್ತಮ ರೀತಿಯಲ್ಲಿ ಬಳಸಿಕೊಂಡು, ಅದರ ನಿರ್ವಹಣೆಯಲ್ಲಿಯೂ ಕಾಳಜಿ ವಹಿಸಬೇಕು ಎಂದು ಅವರು ಸಲಹೆ ನೀಡಿದರು.

ನೂತನ ಸಮುದಾಯ ಭವನ ಉದ್ಘಾಟನೆಯ ಹಿನ್ನೆಲೆಯಲ್ಲಿ ಗ್ರಾಮದಲ್ಲಿ ಸಂಭ್ರಮದ ವಾತಾವರಣ ನಿರ್ಮಾಣವಾಗಿತ್ತು. ಗ್ರಾಮದ ಹಿರಿಯರು ಹಾಗೂ ಮುಖಂಡರು ಶಾಸಕ ಬಸನಗೌಡ ದದ್ದಲ್ ಅವರನ್ನು ಸ್ವಾಗತಿಸಿ, ಗ್ರಾಮದಲ್ಲಿ ಕೈಗೊಂಡ ಅಭಿವೃದ್ಧಿ ಕಾರ್ಯಗಳಿಗೆ ಅಭಿನಂದನೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಬಿಚ್ಚಾಲಿಯ ಶ್ರೀ ವೀರಭದ್ರ ಶಿವಾಚಾರ್ಯ ತಾತನವರು, ಕುರ್ಡಿ ಗ್ರಾಮದ ಹಿರಿಯ ಮುಖಂಡರು, ಸುತ್ತಮುತ್ತಲಿನ ಗ್ರಾಮಗಳ ಮುಖಂಡರು, ಯುವಕರು, ಗ್ರಾಮಸ್ಥರು ಹಾಗೂ ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಉಪಸ್ಥಿತರಿದ್ದರು.

# ಮಟಮಾರಿ ಗ್ರಾಮದಲ್ಲಿ ₹3 ಕೋಟಿ ವೆಚ್ಚದ ರಸ್ತೆ ಕಾಮಗಾರಿಗೆ ಶಾಸಕ ಬಸನಗೌಡ ದದ್ದಲ್ ಭೂಮಿಪೂಜೆ

ಮೂಲಸೌಕರ್ಯ ಅಭಿವೃದ್ಧಿ ಕಾಮಗಾರಿಗಳನ್ನು ಹಂತ ಹಂತವಾಗಿ ಕೈಗೊಳ್ಳಲಾಗುತ್ತಿದ್ದು, ಸುಗಮ ಸಂಪರ್ಕ ಹಾಗೂ ಸಮಗ್ರ ಗ್ರಾಮೀಣ ಅಭಿವೃದ್ಧಿಗೆ ಒತ್ತು ನೀಡಲಾಗುವುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ಸ್ಥಳೀಯ ಮುಖಂಡರು, ಜನಪ್ರತಿನಿಧಿಗಳು, ಗ್ರಾಮಸ್ಥರು ಹಾಗೂ ಸಂಬಂಧಪಟ್ಟ ಅಧಿಕಾರಿಗಳು ಉಪಸ್ಥಿತರಿದ್ದರು.

# ಸೆ.17ರಿಂದ ಅನಿರ್ದಿಷ್ಟಾವಧಿ ಹೋರಾಟ: ವಿವಿಧ ಬೇಡಿಕೆಗಳ ಈಡೇರಿಕೆಗೆ ದಲಿತ ಸಂಘಟನೆಗಳ ಆಗ್ರಹ

ಎಂದು ಹೇಳಿದರು.

ದಲಿತರ ಮೇಲಿನ ದೌರ್ಜನ್ಯ ಪ್ರಕರಣಗಳಲ್ಲಿ ಪ್ರತಿದೂರು ದಾಖಲಿಸುವ ಕ್ರಮಕ್ಕೆ ಕಡಿವಾಣ ಹಾಕಬೇಕು. ದೇವದುರ್ಗ, ಸಿರವಾರ ಮತ್ತು ಮಾನ್ವಿ ತಾಲೂಕುಗಳಲ್ಲಿ ಮುಂಚೂಣಿಯಲ್ಲಿ ಹೋರಾಟ ನಡೆಸುತ್ತಿರುವ ದಲಿತ ಮುಖಂಡರಿಗೆ ಅಗತ್ಯ ಪೊಲೀಸ್ ರಕ್ಷಣೆ ಕಲ್ಪಿಸಬೇಕು. ರಕ್ಷಣೆ ಒದಗಿಸಲು ಸಾಧ್ಯವಾಗದಿದ್ದಲ್ಲಿ ಆತ್ಮರಕ್ಷಣೆಗಾಗಿ ಕಾನೂನಿನ ವ್ಯಾಪ್ತಿಯಲ್ಲಿ ಶಸ್ತ್ರಾಸ್ತ್ರ ಪರವಾನಗಿ ನೀಡುವ ಕುರಿತು ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ದಲಿತರ ಪ್ರಾಣ ಮತ್ತು ಆಸ್ತಿ ರಕ್ಷಣೆಗಾಗಿ ಪ್ರತ್ಯೇಕ ರೆಜಿಮೆಂಟ್ ಸ್ಥಾಪನೆಗೆ ಸರ್ಕಾರ ಅನುಮತಿ ನೀಡಬೇಕು. ಅಲ್ಲದೆ, ರಾಯಚೂರು ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡುವ ನಿಟ್ಟಿನಲ್ಲಿ ಜಿಲ್ಲೆಯ ಶಾಸಕರಿಗೆ ಸಚಿವ ಸಂಪುಟದಲ್ಲಿ ಪ್ರಾತಿನಿಧ್ಯ ಕಲ್ಪಿಸಬೇಕು ಎಂಬ ಬೇಡಿಕೆಯನ್ನೂ ಸರ್ಕಾರದ ಮುಂದಿಡಲಾಗಿದೆ ಎಂದು ತಿಳಿಸಿದರು.

ಕಳೆದ ಮೂರು ತಿಂಗಳಿಂದ ತಮಗೆ ಜೀವ ಬೆದರಿಕೆಗಳು ಬರುತ್ತಿವೆ ಎಂದು ಎಸ್. ಮಾರೆಪ್ಪ ಹಾಗೂ ರವೀಂದ್ರನಾಥ ಪಟ್ಟಿ ಆರೋಪಿಸಿದರು. ಈ ಹಿನ್ನೆಲೆಯಲ್ಲಿ ತಮಗೆ ಸೂಕ್ತ ಭದ್ರತೆ ಒದಗಿಸಬೇಕು ಎಂದು ಆಗ್ರಹಿಸಿದ ಅವರು, ಜಿಲ್ಲೆಯಲ್ಲಿ ಕಾನೂನು ಮತ್ತು ಸುವ್ಯವಸ್ಥೆ ನಿರ್ವಹಣೆಯಲ್ಲಿ ಪೊಲೀಸ್ ಇಲಾಖೆ ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿಲ್ಲ ಎಂದು ಆರೋಪಿಸಿದರು. ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳನ್ನು ವರ್ಗಾವಣೆ ಮಾಡಬೇಕೆಂಬ ಬೇಡಿಕೆಯನ್ನೂ ಮುಂದಿಟ್ಟರು.

ಗೃಹ ಸಚಿವ ಪ್ರಿಯಾಂಕ ಖರ್ಗೆ ಅವರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿದ ಮುಖಂಡರು, ಕೆ.ಇ. ಕುಮಾರ್ ಹಾಗೂ ಅವರ ತಂಡದ ಕಾರ್ಯವೈಖರಿಯ ವಿರುದ್ಧವೂ ಅಸಮಾಧಾನ ವ್ಯಕ್ತಪಡಿಸಿದರು. ಕೆ.ಇ. ಕುಮಾರ್ ಅವರಿಗೆ ಮೂರ್ನಾಲ್ಕು ಹೆಸರುಗಳಿವೆ ಎಂದು ಆರೋಪಿಸಿದ ಎಸ್. ಮಾರೆಪ್ಪ ಮತ್ತು ರವೀಂದ್ರನಾಥ ಪಟ್ಟಿ, ಅವರ ತಂಡದವರು ಗೃಹ ಸಚಿವ ಪ್ರಿಯಾಂಕ ಖರ್ಗೆ ಅವರ ಮನೆಯ ಜೀತದಾಳುಗಳಂತೆ ವರ್ತಿಸುತ್ತಿದ್ದಾರೆ ಎಂದು ಆರೋಪಿಸಿದರು.

ತಮ್ಮ ಬೇಡಿಕೆಗಳಿಗೆ ಸರ್ಕಾರ ಸ್ಪಂದಿಸುವವರೆಗೂ ಹೋರಾಟ ಮುಂದುವರಿಸುವ ಉದ್ದೇಶವಿದ್ದು, ಸೆ.17ರಿಂದ ಆರಂಭವಾಗುವ ಅನಿರ್ದಿಷ್ಟಾವಧಿ ಪ್ರತಿಭಟನೆಯಲ್ಲಿ ಜಿಲ್ಲೆಯ ದಲಿತ ಮತ್ತು ಪ್ರಗತಿಪರ ಸಂಘಟನೆಗಳ ಮುಖಂಡರು, ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಬೆಂಬಲ ನೀಡಬೇಕು ಎಂದು ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಎಸ್. ಮಾರೆಪ್ಪ, ವಿಶ್ವನಾಥ ಪಟ್ಟಿ, ಹೇಮರಾಜ್ ಆಸ್ಕಿಹಾಳ್, ನರಸಿಂಹಲು, ಆಂಜನೇಯ್ಯ ಕುರುಬದೊಡ್ಡಿ, ಶ್ರೀನಿವಾಸ್ ಕೊಪ್ಪರ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಕಲ್ಯಾಣ ಕರ್ನಾಟಕದ ಸಮಗ್ರ ಅಭಿವೃದ್ಧಿಗೆ ಆಗ್ರಹಿಸಿ ಸೆ.17ರಂದು ಕಲಬುರಗಿಯಲ್ಲಿ ಸಂಕಲ್ಪ ಸಮಾವೇಶ

ಉದ್ಯೋಗ ಕ್ಷೇತ್ರಗಳಲ್ಲಿ ಮೂಲಸೌಕರ್ಯದ ಕೊರತೆ ಮುಂದುವರಿದಿದೆ. ಈ ಭಾಗದ ಅಭಿವೃದ್ಧಿಗಾಗಿ ಬಿಡುಗಡೆಯಾಗುವ ಅನುದಾನ ಪರಿಣಾಮಕಾರಿಯಾಗಿ ಬಳಕೆಯಾಗುವಂತೆ ನೋಡಿಕೊಳ್ಳುವುದರ ಜೊತೆಗೆ ಕೆಕೆಆರ್‌ಡಿಬಿಯನ್ನು ಜನರಿಗೆ ಉತ್ತರದಾಯಿಯಾಗಿಸುವ ವ್ಯವಸ್ಥೆ ರೂಪಿಸಬೇಕು ಎಂದು ಆಗ್ರಹಿಸಿದರು.

ಶಾಲೆಗಳಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳು, ಆಸ್ಪತ್ರೆ ಹಾಗೂ ಆರೋಗ್ಯ ಕೇಂದ್ರಗಳಲ್ಲಿನ ವೈದ್ಯರು ಮತ್ತು ಸಿಬ್ಬಂದಿ ಕೊರತೆ, ವಿಶ್ವವಿದ್ಯಾಲಯಗಳಲ್ಲಿನ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಹುದ್ದೆಗಳನ್ನು ಆದ್ಯತೆ ಮೇರೆಗೆ ಭರ್ತಿ ಮಾಡಬೇಕು. ವಿಶೇಷವಾಗಿ ಸುಮಾರು 30 ಸಾವಿರ ಶಿಕ್ಷಕರ ಹುದ್ದೆಗಳು ಸೇರಿದಂತೆ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳ ಭರ್ತಿಗೆ ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಸಂವಿಧಾನದ ಕಲಂ 371(ಜೆ) ಸೌಲಭ್ಯಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಪ್ರತ್ಯೇಕ ಸಚಿವಾಲಯ ಸ್ಥಾಪಿಸಬೇಕು. ರಾಯಚೂರಿನಲ್ಲಿ ಅಖಿಲ ಭಾರತ ವೈದ್ಯಕೀಯ ವಿಜ್ಞಾನ ಸಂಸ್ಥೆ (ಏಮ್ಸ್) ಸ್ಥಾಪನೆಗೆ ಕೇಂದ್ರ ಸರ್ಕಾರದ ಮೇಲೆ ರಾಜ್ಯ ಸರ್ಕಾರ ಒತ್ತಡ ತರಬೇಕು. ಕೆಕೆಆರ್‌ಡಿಬಿ ಅನುದಾನ ಬಳಕೆಗೆ ಸಂಬಂಧಿಸಿದ ನಿಯಮಗಳನ್ನು ಸರಳೀಕರಿಸಿ ಅಭಿವೃದ್ಧಿ ಕಾಮಗಾರಿಗಳಿಗೆ ವೇಗ ನೀಡಬೇಕು ಎಂದು ಹೇಳಿದರು.

ಕೃಷ್ಣಾ ನದಿ ನೀರನ್ನು ಸಮರ್ಪಕವಾಗಿ ಬಳಸಿಕೊಂಡು ಕಲ್ಯಾಣ ಕರ್ನಾಟಕ ಭಾಗದ ಸುಮಾರು 15 ಲಕ್ಷ ಎಕರೆ ಪ್ರದೇಶಕ್ಕೆ ನೀರಾವರಿ ಸೌಲಭ್ಯ ಕಲ್ಪಿಸಬೇಕು. ಈ ಭಾಗದ ವಿಶ್ವವಿದ್ಯಾಲಯಗಳಲ್ಲಿ ಅಗತ್ಯ ಮೂಲಸೌಕರ್ಯಗಳನ್ನು ಅಭಿವೃದ್ಧಿಪಡಿಸುವುದರ ಜೊತೆಗೆ ಯುವಜನರಿಗೆ ಉದ್ಯೋಗಾವಕಾಶ ಹೆಚ್ಚಿಸಲು ಕೌಶಲ್ಯಾಭಿವೃದ್ಧಿ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಬೇಕು ಎಂಬ ಬೇಡಿಕೆಗಳನ್ನೂ ಸಮಾವೇಶದ ಮೂಲಕ ಸರ್ಕಾರದ ಮುಂದಿಡಲಾಗುವುದು ಎಂದು ತಿಳಿಸಿದರು.

ಸೆ.17ರಂದು ಬೆಳಗ್ಗೆ 11ಕ್ಕೆ ಕಲಬುರಗಿಯ ಶ್ರೀ ಶರಣಬಸವೇಶ್ವರ ವಿಶ್ವವಿದ್ಯಾಲಯದ ದೊಡ್ಡ ಬಸವಪ್ಪ ಅಪ್ಪ ಸಭಾ ಮಂಟಪದಲ್ಲಿ ಸಂಕಲ್ಪ ಸಮಾವೇಶ ನಡೆಯಲಿದೆ. ಕಲ್ಯಾಣ ಕರ್ನಾಟಕದ ಅಭಿವೃದ್ಧಿಗೆ ಸಂಬಂಧಿಸಿದ ಪ್ರಮುಖ ವಿಷಯಗಳ ಕುರಿತು ಸಮಾವೇಶದಲ್ಲಿ ಚರ್ಚಿಸಲಾಗುವುದು. ವಿದ್ಯಾರ್ಥಿಗಳು, ಯುವಜನರು, ರೈತರು, ಕಾರ್ಮಿಕರು, ದಲಿತರು, ಅಲ್ಪಸಂಖ್ಯಾತರು ಹಾಗೂ ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಸಮಾವೇಶವನ್ನು ಯಶಸ್ವಿಗೊಳಿಸಬೇಕು ಎಂದು ಕರೆ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಚಾಮರಸ ಮಾಲಿ ಪಾಟೀಲ್, ಬೂದಯ್ಯ ಸ್ವಾಮಿ, ಕೆ.ಜಿ. ವೀರೇಶ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಸೆಪ್ಟಂಬರ್ ಮಾಹೆಗೆ ಪಡಿತರ ಧಾನ್ಯ ವಿತರಣೆ: ಜಿಲ್ಲಾಧಿಕಾರಿ ಪೂವಿತಾ ಎಸ್.



ರಾಯಚೂರು ಸೆ. 15 (ಕರ್ನಾಟಕ ವಾರ್ತೆ): ರಾಯಚೂರಿನ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯಿಂದ 2026ರ ಸೆಪ್ಟಂಬರ್ ಮಾಹೆಗೆ ಪಡಿತರ ಧಾನ್ಯಗಳನ್ನು ವಿತರಣೆ ಮಾಡಲಾಗುತ್ತಿದೆ ಎಂದು ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ತಿಳಿಸಿದ್ದಾರೆ.

ರಾಜ್ಯ ಸರ್ಕಾರದ ಮಾರ್ಗಸೂಚಿಯಂತೆ ಏಕ ಸದಸ್ಯ, ದ್ವಿ ಸದಸ್ಯ ಮತ್ತು ತ್ರಿ ಸದಸ್ಯ ಫಲಾನುಭವಿಗಳಿರುವ ಎಎವೈ ಪಡಿತರ ಚೀಟಿಗಳನ್ನು ಹೊರತುಪಡಿಸಿ ನಾಲ್ಕು ಮತ್ತು ನಾಲ್ಕಕಿಂತ ಹೆಚ್ಚಿನ ಸದಸ್ಯರುಳ್ಳ ಕೇಂದ್ರ ರಾಜ್ಯ ವ್ಯಾಪ್ತಿಯ ಅಂತ್ಯೋದಯ (ಎಎವೈ) ಮತ್ತು ಪಿ.ಹೆಚ್.ಹೆಚ್ (ಬಿಪಿಎಲ್) ಪಡಿತರ ಚೀಟಿಯಲ್ಲಿನ ಪ್ರತಿ ಫಲಾನುಭವಿಗೆ ಆಗಸ್ಟ್ 2026 ರ ಮಾಹೆಯ 05 ಕೆ.ಜಿ ಮತ್ತು ಸೆಪ್ಟೆಂಬರ್ 2026 ರ ಮಾಹೆಯ 05 ಕೆ.ಜಿ ಅಕ್ಕಿ ಹೀಗೆ ಒಟ್ಟು 10 ಕೆ.ಜಿ ಅಕ್ಕಿಯನ್ನು ಉಚಿತವಾಗಿ ವಿತರಿಸಲಾಗುವುದು.

ಪಡಿತರ ಚೀಟಿದಾರರು ಪಡಿತರ ಪಡೆಯುವ ಸಮಯದಲ್ಲಿ ಒಂದೇ ಬಾರಿ ಬಯೋಮೆಟ್ರಿಕ್ ನೀಡುವುದು ಮತ್ತು ಅನ್ನಸುವಿಧಾ ಯೋಜನೆಯ ಪಡಿತರ ಫಲಾನುಭವಿಗಳು ಸೆಪ್ಟೆಂಬರ್ 2026 ರ ಮಾಹೆಯಲ್ಲಿ ನ್ಯಾಯಬೆಲೆ ಅಂಗಡಿಗೆ ಭೇಟಿ ನೀಡಿ ಒಂದು ಬಾರಿ ಬಯೋಮೆಟ್ರಿಕ್ ನೀಡಿ ಪಡಿತರವನ್ನು ಪಡೆದುಕೊಳ್ಳಬಹುದಾಗಿದೆ.

ಒಂದು ರಾಷ್ಟ ಒಂದು ಪಡಿತರ ಚೀಟಿ (ಅಂತರ್ ರಾಜ್ಯ/ ಅಂತರ್ ಜಿಲ್ಲೆ) ಪೋರ್ಟೆಬಿಲಿಟಿ ಜಾರಿಯಲ್ಲಿರುವುದರಿಂದ ಯಾವುದೇ ರಾಜ್ಯದ ಪಡಿತರ ಚೀಟಿದಾರರು ಯಾವುದೇ ವರ್ಗದ ಪಡಿತರ ಚೀಟಿದಾರರು ಯಾವುದೇ ನ್ಯಾಯಬೆಲೆ ಅಂಗಡಿಯಲ್ಲಿ ಪಡಿತರವನ್ನು ಪಡೆಯಲು ಅವಕಾಶ ಕಲ್ಪಿಸಲಾಗಿದೆ. ಯಾವುದೇ ನ್ಯಾಯಬೆಲೆ ಅಂಗಡಿಕಾರರು ಕಡಿಮೆ ಪ್ರಮಾಣದ ಪಡಿತರವನ್ನು ವಿತರಣೆ ಮಾಡಿದ್ದಲ್ಲಿ, ಹಣ ಕೇಳಿದ್ದಲ್ಲಿ ಮತ್ತು ಇತರೆ ದೂರುಗಳಿಗೆ ನಿಶುಲ್ಕ ದೂರವಾಣಿ ಸಂಖ್ಯೆ 1967ಗೆ ಹಾಗೂ ತಾಲ್ಲೂಕಿನಲ್ಲಿರುವ ತಹಶೀಲ್ದಾರರ ಕಛೇರಿಗೆ ಅಥವಾ ಜಿಲ್ಲೆಯ ಉಪನಿರ್ದೇಶಕರ ಕಛೇರಿಗೆ ದೂರನ್ನು ಸಲ್ಲಿಸಬಹುದಾಗಿದೆ.

ಸದರಿ ಯೋಜನೆಯಡಿ ವಿತರಿಸಲಾದ ಆಹಾರ ಧಾನ್ಯಗಳನ್ನು ಹಣಕ್ಕಾಗಿ ಪಡಿತರ ಚೀಟಿದಾರರು ಮಾರಾಟ ಮಾಡುವುದಾಗಲಿ ಅಥವಾ ಸಂಗ್ರಹಣೆ ಮಾಡುವುದು ಕಂಡುಬದಲ್ಲಿ ಅಂತಹ ಪಡಿತರ ಚೀಟಿದಾರರಿಗೆ ವಿತರಿಸಲಾದ ಆಹಾರ ಧಾನ್ಯಗಳಿಗೆ ಮುಕ್ತ ಮಾರುಕಟ್ಟೆ ದರಕ್ಕೆ ದಂಡ ವಿಧಿಸಲಾಗುವುದು ಮತ್ತು ಸದರಿ ಪಡಿತರ ಚೀಟಿಯನ್ನು ಆರು ತಿಂಗಳ ಅವಧಿಗೆ ಅಮಾನತ್ತುಗೊಳಿಸಲಾವುದೆಂದು ತಿಳಿಸಿದೆ.

ವಿಶೇಷ ಗಮನಕ್ಕೆ: ಏಕ ಸದಸ್ಯ, ದ್ವಿ ಸದಸ್ಯ ಮತ್ತು ತ್ರಿ ಸದಸ್ಯ ಫಲಾನುಭವಿಗಳಿರುವ ಎಎವೈ(ಅಂತ್ಯೋದಯ) ಪಡಿತರ ಚೀಟಿಗಳಿಗೆ ಸೆಪ್ಟೆಂಬರ್ 2026 ರ ಮಾಹೆಯಲ್ಲಿ ಹಂಚಿಕೆಯು ಇರುವುದಿಲ್ಲ. ಆಗಸ್ಟ್ 2026 ಮತ್ತು ಸೆಪ್ಟೆಂಬರ್ 2026 ರ ಮಾಹೆಯ ಅನ್ನಭಾಗ್ಯ ಯೋಜನೆಯಡಿ ವಿತರಿಸಲಾಗುವ 10 ಕೆಜಿ ಅಕ್ಕಿಯನ್ನು ಪಡೆಯಲು ಒಂದೇ ಬಾರಿ ಬಯೋಮೆಟ್ರಿಕ್ ದೃಢೀಕರಣ ನೀಡಿ ಪಡೆಯುವುದು ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆರ್‌ಸೇಟಿನಿಂದ ಟೈಲರಿಂಗ್ ತರಬೇತಿಗೆ ಅರ್ಜಿ ಆಹ್ವಾನ

ರಾಯಚೂರು ಸೆ. 15 (ಕರ್ನಾಟಕ ವಾರ್ತೆ): ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆ (ಆರ್‌ಸೇಟಿ) ಇವರ ವತಿಯಿಂದ ಗ್ರಾಮೀಣ ನಿರುದ್ಯೋಗಿ ಮಹಿಳೆಯರಿಗಾಗಿ ಟೈಲರಿಂಗ್ ತರಬೇತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ತರಬೇತಿಯು ಸೆಪ್ಟಂಬರ್ 21ರಿಂದ ಪ್ರಾರಂಭವಾಗಿ 31ದಿನಗಳ ಕಾಲ ನಡೆಯಲಿದೆ. ತರಬೇತಿಯ ಅವಧಿಯಲ್ಲಿ ಅಭ್ಯರ್ಥಿಗಳಿಗೆ ಉಚಿತ ಊಟ ಹಾಗೂ ಉಚಿತ ವಸತಿ ಸೌಕರ್ಯದ ವ್ಯವಸ್ಥೆ ಇರುತ್ತದೆ. ಆಸಕ್ತರು 8ನೇ ತರಗತಿ ವ್ಯಾಸಂಗ ಮಾಡಿರುವ 18 ರಿಂದ 50 ವರ್ಷದೊಳಗಿನ ವಯಸ್ಸು ಹೊಂದಿರುವ ಗ್ರಾಮೀಣ ಭಾಗದ ಬಿಪಿಎಲ್ ಅಭ್ಯರ್ಥಿಗಳು ಆಧಾರ್ ಕಾರ್ಡ್ ಜೆರಾಕ್ಸ್, ಗ್ರಾಮೀಣ ಪಡಿತರ ಚೀಟಿ (ಬಿಪಿಎಲ್, ಪಿಎಚ್‌ಎಚ್, ಎನ್‌ಪಿಎಚ್‌ಎಚ್ ಮತ್ತು ಆಯ್‌ವೈ) ಜೆರಾಕ್ಸ್, 4 ಫೋಟೋಗಳು, ಬ್ಯಾಂಕ್ ಪಾಸ್‌ಬುಕ್ ಜೆರಾಕ್ಸ್ ಹಾಗೂ ಪ್ಯಾನ್ ಕಾರ್ಡ್ ಜೆರಾಕ್ಸೊಂದಿಗೆ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ನಿರ್ದೇಶಕರು ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆ (ಆರ್‌ಸೇಟಿ) ಆಶಾಪೂರು ರಸ್ತೆ, ರಾಯಚೂರು. ಅಥವಾ ಮೊಬೈಲ್ ಸಂಖ್ಯೆ: 8217382735, 9742470999ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆಯ ನಿರ್ದೇಶಕರಾದ ವಿಜಯಕುಮಾರ್ ಬಡಿಗೇರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸೆ.15ರಂದು ವಿದ್ಯಾ ಚೇತನ ವಿದ್ಯಾ-ವ್ಯಕ್ತಿತ್ವ ವಿಕಸನ ತರಬೇತಿ ಶಿಬಿರ



ಮಾನ್ವಿ: ಪಟ್ಟಣದ ಶ್ರೀ ವಾಸವಿ ಕಲ್ಯಾಣ ಮಂಟಪದಲ್ಲಿ ಕರ್ನಾಟಕ ಆರ್ಯವೈಶ್ಯ ಯುವಜನ ಮಹಾಸಭಾ ಹಾಗೂ ಮಾನ್ವಿ ವಾಸವಿ ಯುವಜನ ಸಂಘದ ಸಂಯುಕ್ತಾಶ್ರಯದಲ್ಲಿ 10ನೇ ತರಗತಿ ಮತ್ತು ಪಿಯುಸಿ ವಿದ್ಯಾರ್ಥಿಗಳಿಗಾಗಿ ವಿದ್ಯಾ ಚೇತನ ಶೀರ್ಷಿಕೆಯಡಿ ವಿದ್ಯಾ-ವ್ಯಕ್ತಿತ್ವ ವಿಕಸನ ತರಬೇತಿ ಶಿಬಿರವನ್ನು ಸೆ.15 ಮಂಗಳವಾರ ಹಮ್ಮಿಕೊಳ್ಳಲಾಗಿದೆ ಎಂದು ಕರ್ನಾಟಕ ಆರ್ಯವೈಶ್ಯ ಯುವಜನ ಮಹಾಸಭಾದ ಕಲೆ ಮತ್ತು ಸಂಸ್ಕೃತಿ ವಿಭಾಗದ ಚೇರ್ಮನ್ ಹಾಗೂ ಮಾನ್ವಿ ವಾಸವಿ ಯುವಜನ ಸಂಘದ ಅಧ್ಯಕ್ಷ ವಲ್ಲೂರು ಇ. ಬಸವರಾಜ ಶ್ರೇಷ್ಠಿ ತಿಳಿಸಿದ್ದಾರೆ.

ಕಾರ್ಯಕ್ರಮವನ್ನು ಮಾನ್ವಿ ಪಟ್ಟಣದ ಆರ್ಯವೈಶ್ಯ ಸಂಘದ ಅಧ್ಯಕ್ಷ ಹಾಗೂ ಉದ್ಯಮಿ ಮುತ್ತುರಾಜ ಶೆಟ್ಟಿ ಮತ್ತು ಶ್ರೀ ವಾಸವಿ ಯುವಜನ ಸಂಘದ ಅಧ್ಯಕ್ಷ ಹಾಗೂ ಕಲೆ ಮತ್ತು ಸಂಸ್ಕೃತಿ ವಿಭಾಗದ ಚೇರ್ಮನ್ ವಲ್ಲೂರು ಇ. ಬಸವರಾಜ ಶೆಟ್ಟಿ ಉದ್ಘಾಟಿಸಲಿದ್ದಾರೆ. ಕರ್ನಾಟಕ ಆರ್ಯವೈಶ್ಯ ಯುವಜನ ಮಹಾಸಭಾ (ರಿ.) ಬೆಂಗಳೂರು ರಾಜ್ಯಾಧ್ಯಕ್ಷ ಭೀಮರಾಜ್ ಗಂಗಾವತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಮಾನ್ವಿ ತಹಸೀಲ್ದಾರ್ ಭೀಮರಾಯ ಬಿ. ರಾಮಸಮುದ್ರ, ಕರ್ನಾಟಕ ಆರ್ಯವೈಶ್ಯ ಯುವಜನ ಮಹಾಸಭಾ ಮಾಜಿ ಹಿರಿಯ ಉಪಾಧ್ಯಕ್ಷ ಆನಂದ ತುರ್ವಿಹಾಳ್ ಗಂಗಾವತಿ, ಪ್ರಧಾನ ಕಾರ್ಯದರ್ಶಿ ರಾಕೇಶ ಪಾನಘಂಟಿ, ಮಧುಸೂಧನ ಸಿಂಧನೂರು, ಹನುಮನಾಡು ವಿಭಾಗೀಯ ಉಪಾಧ್ಯಕ್ಷ ರವಿತೇಜ ಡಿ. ಏನಾಪುರ ಸೇಡಂ, ಶಿಕ್ಷಣ ವಿಭಾಗದ ಚೇರ್ಮನ್ ಭರತ್ ಭೂಷಣ್ ಎಚ್.ಎನ್., ಮಾನ್ವಿ ಆವೋಪ ಸಂಘದ ಅಧ್ಯಕ್ಷ ಜವಳಗೇರಿ ಕೇಶವಯ್ಯ ಶ್ರೇಷ್ಠಿ ಹಾಗೂ ಬಲ್ಲಟಗಿ ಸರ್ಕಾರಿ ಸಂಯುಕ್ತ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ಸತ್ಯನಾರಾಯಣ ಭಂಡಾರಿ ಉಪಸ್ಥಿತರಿರಲಿದ್ದಾರೆ.

ಶ್ರೀ ವೆಂಕಟೇಶ್ವರ ಪದವಿ ಮಹಾವಿದ್ಯಾಲಯ ಮಾನ್ವಿಯ ಪ್ರಾಂಶುಪಾಲ ಆಂಜನೇಯ ನಸಲಾಪುರ ಅವರು ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸಿ ಶಿಬಿರಾರ್ಥಿಗಳಿಗೆ ತರಬೇತಿ ನೀಡಲಿದ್ದಾರೆ ಎಂದು ತಿಳಿಸಿದ್ದಾರೆ.





ಲಿಂಗಸುಗೂರಿನಲ್ಲಿ ಸಂಭ್ರಮದ ಗಜಾನನೋತ್ಸವದ ಅಂಗವಾಗಿ ಪಟ್ಟಣದ ವಿವಿಧ ಬಡಾವಣೆಗಳಲ್ಲಿ ಪ್ರತಿಷ್ಠಾಪಿಸಲಾದ ಗಣೇಶ ಮೂರ್ತಿಗಳು ಭಕ್ತರ ಗಮನ ಸೆಳೆಯುತ್ತಿವೆ. ಹನುಮಂತ ದೇವಸ್ಥಾನದ ಎದುರಿನ ಹಿಂದೂ ಮಹಾ ಗಜಾನನ, ಬಸ್ ನಿಲ್ದಾಣ ಸಮೀಪದ ವಿವೇಕಾನಂದ ನಗರದಲ್ಲಿನ ಲಿಂಗಸುಗೂರು ಕಾ. ಮಹಾರಾಜ ಗಜಾನನ, ಸಾಯಿ ನಗರದಲ್ಲಿನ ಗಜಾನನ, ಪ್ರವಾಸಿ ಮಂದಿರ ಹತ್ತಿರದ ಖೋ-ಖೋ ಬಾಯ್ಸ್ ಗಜಾನನ ಹಾಗೂ ಸಾರ್ವಜನಿಕ ಉದ್ಯಾನವನದ ಸಮೀಪ ಜೋಕಾಲಿಯಲ್ಲಿ ಕೂರಿಸಿರುವ ಪಾರ್ಕ ಕಾ ಮಹಾರಾಜ ಗಜಾನನ ಭಕ್ತರಲ್ಲಿ ವಿಶೇಷ ಸಂಭ್ರಮ ಮೂಡಿಸಿವೆ.

# ಕಸಾಪ ವತಿಯಿಂದ ಇಂಜಿನಿಯರ್‌ಗಳ ದಿನಾಚರಣೆ: ಸರ್ ಎಂ. ವಿಶ್ವೇಶ್ವರಯ್ಯ ಸ್ಮರಣೆ




ರಾಯಚೂರು: ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಸಂಯುಕ್ತಾಶ್ರಯದಲ್ಲಿ ಮಂಗಳವಾರ ನಗರದ ಕನ್ನಡ ಭವನದಲ್ಲಿ ಇಂಜಿನಿಯರ್‌ಗಳ ದಿನಾಚರಣೆ ಆಚರಿಸಲಾಯಿತು. ಈ ಸಂದರ್ಭದಲ್ಲಿ ಭಾರತ ರತ್ನ ಸರ್ ಎಂ. ವಿಶ್ವೇಶ್ವರಯ್ಯ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಗೌರವ ಅರ್ಪಿಸಲಾಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಹಿರಿಯ ಸಾಹಿತಿ ವೀರಹನುಮಾನ ಅವರು, ಸರ್ ಎಂ. ವಿಶ್ವೇಶ್ವರಯ್ಯ ಅವರು ಕೇವಲ ಶ್ರೇಷ್ಠ ಇಂಜಿನಿಯರ್ ಮಾತ್ರವಲ್ಲದೆ, ಆಧುನಿಕ ಭಾರತದ ನಿರ್ಮಾಣಕ್ಕೆ ಮಹತ್ವದ ಕೊಡುಗೆ ನೀಡಿದ ದೂರದೃಷ್ಟಿಯ ವ್ಯಕ್ತಿಯಾಗಿದ್ದರು. ಅವರ ಶ್ರಮ, ಪ್ರಾಮಾಣಿಕತೆ, ಶಿಸ್ತು ಹಾಗೂ ದೇಶಪ್ರೇಮ ಎಲ್ಲರಿಗೂ ಆದರ್ಶಪ್ರಾಯವಾಗಿದೆ ಎಂದು ಹೇಳಿದರು.

1915ರಲ್ಲಿ ಮೈಸೂರು ಸಂಸ್ಥಾನದ ಮಹಾರಾಜ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಕಾಲದಲ್ಲಿ ಕನ್ನಡ ಸಾಹಿತ್ಯ ಪರಿಷತ್ತು ಸ್ಥಾಪನೆಯಾಗುವ ಸಂದರ್ಭದಲ್ಲಿ ಅಂದಿನ ಮೈಸೂರು ರಾಜ್ಯದ ದಿವಾನರಾಗಿದ್ದ ಸರ್ ಎಂ. ವಿಶ್ವೇಶ್ವರಯ್ಯ ಅವರ ಆಡಳಿತಾತ್ಮಕ ಸಹಕಾರ ಮತ್ತು ಪ್ರೋತ್ಸಾಹವೂ ಮಹತ್ವದ್ದಾಗಿತ್ತು ಎಂದು ತಿಳಿಸಿದರು.

ಆಡಳಿತ ಮತ್ತು ಶಿಕ್ಷಣ ಕ್ಷೇತ್ರದಲ್ಲಿ ಕನ್ನಡ ಭಾಷೆಗೆ ಸೂಕ್ತ ಸ್ಥಾನ ದೊರೆಯಬೇಕು ಎಂಬ ಆಶಯ ಹೊಂದಿದ್ದ ವಿಶ್ವೇಶ್ವರಯ್ಯ ಅವರು, ಮಾತೃಭಾಷೆಯ ಮೂಲಕ ಜ್ಞಾನಾರ್ಜನೆ ಹಾಗೂ ತಾಂತ್ರಿಕ ಶಿಕ್ಷಣಕ್ಕೆ ಮಹತ್ವ ನೀಡಿದ್ದರು. ಅವರು ಆರಂಭಿಸಿದ ಮೈಸೂರು ಆರ್ಥಿಕ ಸಮ್ಮೇಳನಗಳಲ್ಲಿ ಕೈಗಾರಿಕೆ ಮತ್ತು ಕೃಷಿಯ ಜೊತೆಗೆ ಶಿಕ್ಷಣ, ಸಾಹಿತ್ಯ ಹಾಗೂ ಜನಸಾಮಾನ್ಯರ ಸಾಕ್ಷರತೆಗೂ ಆದ್ಯತೆ ನೀಡಲಾಗುತ್ತಿತ್ತು ಎಂದು ಹೇಳಿದರು.

ಕನ್ನಡ ಭಾಷೆ ಮತ್ತು ಸಾಹಿತ್ಯದ ಬೆಳವಣಿಗೆಗಾಗಿ ಕನ್ನಡ ಸಾಹಿತ್ಯ ಪರಿಷತ್ತು ಹಮ್ಮಿಕೊಳ್ಳುತ್ತಿರುವ ಶೈಕ್ಷಣಿಕ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳಿಗೆ ವಿಶ್ವೇಶ್ವರಯ್ಯ ಅವರ ಶಿಸ್ತು, ಪರಿಶ್ರಮ ಮತ್ತು ಪ್ರಾಮಾಣಿಕತೆಯ ಬದುಕು ಸದಾ ಪ್ರೇರಣೆಯಾಗಿದೆ ಎಂದರು.

ಈ ಸಂದರ್ಭದಲ್ಲಿ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಡಾ. ಬಿ. ವಿಜಯ ರಾಜೇಂದ್ರ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಕೋಶಾಧ್ಯಕ್ಷ ನಾಗಪ್ಪ ಹೊರಪ್ಯಾಟಿ, ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಗೌರವ ಕಾರ್ಯದರ್ಶಿ ರಾವುತರಾವ್ ಬರೂರ, ಪ್ರತಿಭಾ ಗೋನಾಳ್, ಈರಣ್ಣ ಬೆಂಗಾಲಿ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಶ್ರೀ ಗಣೇಶನಿಗೆ ವಿಶೇಷ ಪೂಜೆ ಸಲ್ಲಿಸಿದ ಶಾಸಕ ಜಿ. ಹಂಪಯ್ಯ ನಾಯಕ್



ಮಾನ್ವಿ: ಮಾನ್ವಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಮಾನ್ವಿ ನಗರದಲ್ಲಿ ಅಖಿಲ ಭಾರತ ವೀರಶೈವ ಮಹಾಸಭಾ ಮಾನ್ವಿ ಘಟಕದ ವತಿಯಿಂದ ಗಣೇಶೋತ್ಸವದ ಅಂಗವಾಗಿ ಪ್ರತಿಷ್ಠಾಪಿಸಿರುವ ವಿಘ್ನ ವಿನಾಶಕ ಶ್ರೀ ಗಣೇಶನಿಗೆ ಮಾನ್ವಿ ಶಾಸಕ ಜಿ. ಹಂಪಯ್ಯ ನಾಯಕ್ ಸಾಹುಕಾರ್ ವಿಶೇಷ ಪೂಜೆ ಸಲ್ಲಿಸಿದರು.

ಪೂಜೆ ನೆರವೇರಿಸಿದ ಬಳಿಕ ಮಾತನಾಡಿದ ಶಾಸಕ ಜಿ. ಹಂಪಯ್ಯ ನಾಯಕ್, ಸಾರ್ವಜನಿಕ ಗಣೇಶೋತ್ಸವವು ದೇಶದ ಸ್ವಾತಂತ್ರ್ಯ ಹೋರಾಟದ ಇತಿಹಾಸದೊಂದಿಗೆ ಆಳವಾದ ನಂಟು ಹೊಂದಿದೆ ಎಂದು ಹೇಳಿದರು. ಬ್ರಿಟಿಷರ ಆಡಳಿತದ ವಿರುದ್ಧ ಜನರನ್ನು ಸಂಘಟಿಸುವ ಉದ್ದೇಶದಿಂದ ಸ್ವಾತಂತ್ರ್ಯ ಹೋರಾಟಗಾರ ಲೋಕಮಾನ್ಯ ಬಾಲಗಂಗಾಧರ ತಿಲಕ್ ಅವರು 1893ರಲ್ಲಿ ಸಾರ್ವಜನಿಕ ಗಣೇಶೋತ್ಸವಕ್ಕೆ ಹೊಸ ರೂಪ ನೀಡಿ, ಅದನ್ನು ಜನಜಾಗೃತಿ ಹಾಗೂ ದೇಶಭಕ್ತಿಯ ವೇದಿಕೆಯಾಗಿ ರೂಪಿಸಿದರು ಎಂದು ತಿಳಿಸಿದರು.

ಬ್ರಿಟಿಷರ ಆಡಳಿತದ ಸಂದರ್ಭದಲ್ಲಿ ಜನಸಾಮಾನ್ಯರು ಒಂದೇ ವೇದಿಕೆಯಲ್ಲಿ ಸೇರಿ ದೇಶಭಕ್ತಿ, ಸ್ವಾತಂತ್ರ್ಯ ಹಾಗೂ ಏಕತೆಯ ಸಂದೇಶಗಳನ್ನು ಹಂಚಿಕೊಳ್ಳಲು ಗಣೇಶೋತ್ಸವ ಪ್ರಮುಖ ಮಾಧ್ಯಮವಾಗಿತ್ತು. ಆ ಪರಂಪರೆ ಇಂದಿಗೂ ಸಾಮಾಜಿಕ ಸಾಮರಸ್ಯ, ಧಾರ್ಮಿಕ ಭಕ್ತಿ ಮತ್ತು ಒಗ್ಗಟ್ಟಿನ ಸಂಕೇತವಾಗಿ ಮುಂದುವರಿಯುತ್ತಿದೆ ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಅಬ್ದುಲ್ ಗಫೂರ್ ಸಾಬ್, ಪಂಚ ಗ್ಯಾರಂಟಿಗಳ ಅಧ್ಯಕ್ಷ ಬಿ.ಕೆ. ಅಮರೇಶಪ್ಪ ವಕೀಲರು, ಜಿ. ನಾಗರಾಜ್, ಮಹಾಂತೇಶ್ ಸ್ವಾಮಿ, ಗುಮ್ಮ ಬಸವರಾಜ್ ವಕೀಲರು, ಅರುಣ್ ಚಂದ್, ರಾಜ ಸುಭಾಷ್ ಚಂದ್ರ ನಾಯಕ್, ಸಿದ್ದಲಿಂಗಪ್ಪ ವಕೀಲರು, ಶರಣಗೌಡ ಗವಿಗಟ್, ಶ್ರೀಧರ್ ಸ್ವಾಮಿ, ಸೈಯದ್ ನಜ್ರುದ್ದೀನ್ ಖಾದ್ರಿ, ಮಹಾಬಲೇಶ್ವರಗೌಡ ಚಿಕಲ್ಪರ್ವಿ, ಹರಿಹರಗೌಡ, ಹುಸೇನ್ ಬೈಗ್, ಚಾಂದ್ ಪಾಷಾ ಗುತ್ತೇದಾರ, ರೇವಣಸಿದ್ದಯ್ಯ ಸ್ವಾಮಿ ಸೇರಿದಂತೆ ಅಖಿಲ ಭಾರತ ವೀರಶೈವ ಮಹಾಸಭಾ ಮಾನ್ವಿ ಘಟಕದ ಪದಾಧಿಕಾರಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ಗೋಪಾಲಸ್ವಾಮಿ ಓಣಿಯ ಶ್ರೀ ವೀರಭದ್ರೇಶ್ವರ ದೇವಸ್ಥಾನದಲ್ಲಿ ಜಯಂತಿ ಆಚರಣೆ






ರಾಯಚೂರು: ನಗರದ ಗೋಪಾಲಸ್ವಾಮಿ ಓಣಿಯಲ್ಲಿರುವ ಶ್ರೀ ವೀರಭದ್ರೇಶ್ವರ ದೇವಸ್ಥಾನದಲ್ಲಿ ಸೆ.15ರಂದು ಶ್ರೀ ವೀರಭದ್ರೇಶ್ವರ ಜಯಂತಿಯನ್ನು ಭಕ್ತಿಭಾವ ಹಾಗೂ ಸಂಭ್ರಮದಿಂದ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಸಮಾಜದ ಹಿರಿಯರಾದ ಚಂದ್ರಶೇಖರ ಪಾಟೀಲ್ ಮಿಯ್ಯಾಪುರ ಮಾತನಾಡಿ, ಭಾದ್ರಪದ ಮಾಸದ ಪ್ರಥಮ ಮಂಗಳವಾರದಂದು ಪ್ರತಿವರ್ಷದಂತೆ ಈ ವರ್ಷವೂ ವೀರಶೈವ ಲಿಂಗಾಯತ ಸಮಾಜದ ವತಿಯಿಂದ ಶ್ರೀ ವೀರಭದ್ರೇಶ್ವರ ಜಯಂತಿಯನ್ನು ಶ್ರದ್ಧಾಭಕ್ತಿಯಿಂದ ಆಚರಿಸಲಾಗಿದೆ ಎಂದು ತಿಳಿಸಿದರು.

ಜಯಂತಿ ಅಂಗವಾಗಿ ಶ್ರೀ ವೀರಭದ್ರೇಶ್ವರ ಸ್ವಾಮಿಗೆ ವಿಶೇಷ ಪೂಜೆ, ಅಲಂಕಾರ ಹಾಗೂ ವಿವಿಧ ಧಾರ್ಮಿಕ ಕಾರ್ಯಕ್ರಮಗಳನ್ನು ನೆರವೇರಿಸಲಾಯಿತು. ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಪೂಜೆ ಸಲ್ಲಿಸಿ ಸ್ವಾಮಿಯ ಆಶೀರ್ವಾದ ಪಡೆದರು.

ಈ ಸಂದರ್ಭದಲ್ಲಿ ಶರಣಪ್ಪ ಬಡಿಸೇಟಿ ಕೊಪ್ಪರ, ರವಿಕುಮಾರ ದೇಸಾಯಿ, ವೀರಭದ್ರ ನಾಗಲಿಕರ್, ಮಲ್ಲಯ್ಯ ಸ್ವಾಮಿ ಅಂಜಳ, ವೀರೇಶ, ಅನೀಲ್ ಸಾಹು, ಶರಣಬಸವ ರಾಮದುರ್ಗ, ಬೂದಯ್ಯಸ್ವಾಮಿ, ಪ್ರವೀಣ ಕುಮಾರ ರೇವಣಿ, ಮಲ್ಲನಗೌಡ ಗೇಜಿಬಾವಿ, ಮಹಾದೇವ ಪಾಟೀಲ್, ಅಯ್ಯನಗೌಡ ಕೋಣಚಪ್ಪಳಿ, ಶಿವರಾಜ ಕೊಡಿ, ಬಸವರಾಜ ಶಾಹಬಾದಿ, ಸಿದ್ದು ಇಂಗಳದಾಳ, ಮಂಜುನಾಥ ಬಳೆ, ಸಂಗಪ್ಪ ಆಲ್ಕೋಡ, ಸುರೇಶ ಚಿಕ್ಕಬೂದೂರ ಸೇರಿದಂತೆ ಅನೇಕ ಭಕ್ತರು ಉಪಸ್ಥಿತರಿದ್ದರು.

# ರೈತರಿಂದ ಹೆದ್ದಾರಿ ತಡೆ: ಜೋಳದ ಬಾಕಿ ಹಣ, ನೀರು ಬಿಡುಗಡೆ ಹಾಗೂ ಬರ ಘೋಷಣೆಗೆ ಆಗ್ರಹ





ಮಾನ್ವಿ: ತಾಲೂಕಿನ ಪೋತ್ನಾಳ್ ಗ್ರಾಮದಲ್ಲಿ ರೈತಪರ ಸಂಘಟನೆಗಳ ಒಕ್ಕೂಟ ಹಾಗೂ ಜೋಳ ಬೆಳೆಗಾರರ ಒಕ್ಕೂಟದ ವತಿಯಿಂದ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ರಾಯಚೂರು ಸಿಂಧನೂರು ಹೆದ್ದಾರಿಯಲ್ಲಿ ಸಾವಿರಾರು ರೈತರು ಮತ್ತು ವಿವಿಧ ಸಂಘಟನೆಗಳ ಮುಖಂಡರು ರಸ್ತೆ ತಡೆ ನಡೆಸಿ ಪ್ರತಿಭಟನೆ ನಡೆಸಿದರು.

ಪ್ರತಿಭಟನೆಯನ್ನು ಉದ್ದೇಶಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ರಾಜ್ಯ ಪ್ರಧಾನ ಕಾರ್ಯದರ್ಶಿ ಅಮೀನ್ ಪಾಶ ದಿದ್ದಿಗಿ ಮಾತನಾಡಿ, ಈ ಭಾಗದ ರೈತರು ಕಳೆದ ಒಂದು ವರ್ಷದ ಹಿಂದೆ ಸರ್ಕಾರದ ಜೋಳ ಖರೀದಿ ಕೇಂದ್ರಗಳಿಗೆ ಬೆಳೆ ಮಾರಾಟ ಮಾಡಿದ್ದರೂ, ಇದುವರೆಗೆ ಹಣ ರೈತರ ಖಾತೆಗಳಿಗೆ ಜಮೆಯಾಗಿಲ್ಲ ಎಂದು ಆರೋಪಿಸಿದರು.

ಬರ ಪರಿಸ್ಥಿತಿಯಿಂದ ಈಗಾಗಲೇ ಸಂಕಷ್ಟಕ್ಕೆ ಸಿಲುಕಿರುವ ರೈತರಿಗೆ ಜೋಳದ ಬಾಕಿ ಹಣವೂ ದೊರೆಯದಿರುವುದರಿಂದ ಮುಂದಿನ ಕೃಷಿ ಚಟುವಟಿಕೆ ಕೈಗೊಳ್ಳಲು ಹಾಗೂ ಕುಟುಂಬ ನಿರ್ವಹಣೆಗೆ ತೀವ್ರ ತೊಂದರೆಯಾಗಿದೆ. ಈ ಕುರಿತು ಜಿಲ್ಲಾಡಳಿತದ ಮೂಲಕ ಸರ್ಕಾರಕ್ಕೆ ಹಲವು ಬಾರಿ ಮನವಿ ಸಲ್ಲಿಸಿದರೂ ಯಾವುದೇ ಪ್ರಯೋಜನವಾಗಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಪೋತ್ನಾಳ್ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಜನರು ಮತ್ತು ಜಾನುವಾರುಗಳಿಗೆ ಕುಡಿಯುವ ನೀರಿನ ಪ್ರಮುಖ ಮೂಲವಾಗಿರುವ ಪೋತ್ನಾಳ್ ಹಿರೇಹಳ್ಳಕ್ಕೆ ಮಸ್ಕಿ ಜಲಾಶಯದಿಂದ ನೀರು ಹರಿಸಬೇಕು. ನೀರು ಬಿಡದಿರುವುದರಿಂದ ಕುಡಿಯುವ ನೀರಿನ ಸಮಸ್ಯೆ ತೀವ್ರಗೊಂಡಿದ್ದು, ಜಿಲ್ಲಾಡಳಿತ ಕೂಡಲೇ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಮಾನ್ವಿ ಮತ್ತು ಸಿರವಾರ ತಾಲೂಕುಗಳಲ್ಲಿ ಅಗತ್ಯ ಮಳೆಯಾಗದ ಪರಿಣಾಮ ರೈತರು ಬಿತ್ತನೆ ಮಾಡಿರುವ ಹತ್ತಿ, ತೊಗರಿ, ಜೋಳ, ಕಡಲೆ ಸೇರಿದಂತೆ ವಿವಿಧ ಬೆಳೆಗಳು ಒಣಗುತ್ತಿವೆ. ಇದರಿಂದ ರೈತರಿಗೆ ದೊಡ್ಡ ಪ್ರಮಾಣದ ನಷ್ಟ ಉಂಟಾಗಿದ್ದು, ಈ ಎರಡೂ ತಾಲೂಕುಗಳನ್ನು ಬರಪೀಡಿತ ಪ್ರದೇಶಗಳ ಪಟ್ಟಿಗೆ ಸೇರಿಸಿ ಬೆಳೆ ನಷ್ಟ ಅನುಭವಿಸಿದ ರೈತರಿಗೆ ಸೂಕ್ತ ಪರಿಹಾರ ನೀಡಬೇಕು ಎಂದು ಆಗ್ರಹಿಸಿದರು.

ರಾಜ್ಯ ಜೆಡಿಎಸ್ ಯುವ ಘಟಕದ ಉಪಾಧ್ಯಕ್ಷ ರಾಜಾ ರಾಮಚಂದ್ರನಾಯಕ ಮಾತನಾಡಿ, ಜೆಡಿಎಸ್ ಸರ್ಕಾರದ ಅವಧಿಯಲ್ಲಿ ರೈತರ ಜಮೀನುಗಳಿಗೆ ಸಮರ್ಪಕವಾಗಿ ಕಾಲುವೆ ನೀರು ಹರಿಸಲಾಗುತ್ತಿತ್ತು ಹಾಗೂ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಮುನ್ನೆಚ್ಚರಿಕೆ ಕ್ರಮ ವಹಿಸಲಾಗುತ್ತಿತ್ತು. ಆದರೆ ಈಗ ರೈತರ ಸಮಸ್ಯೆಗಳಿಗೆ ಸರ್ಕಾರ ಸೂಕ್ತವಾಗಿ ಸ್ಪಂದಿಸದ ಕಾರಣ ರೈತರು ಬೀದಿಗಿಳಿದು ಹೋರಾಟ ನಡೆಸುವ ಪರಿಸ್ಥಿತಿ ಬಂದಿದೆ ಎಂದು ಆರೋಪಿಸಿದರು.

ರೈತರಿಗೆ ಸಮರ್ಪಕವಾಗಿ ಕಾಲುವೆ ನೀರು ಬಿಡದಿದ್ದರೆ ಮತ್ತು ಜೋಳ ಖರೀದಿಯ ಬಾಕಿ ಹಣವನ್ನು ಶೀಘ್ರ ಜಮೆ ಮಾಡದಿದ್ದರೆ ಜೆಡಿಎಸ್ ಪಕ್ಷದ ವತಿಯಿಂದ ರೈತರ ಪರವಾಗಿ ತೀವ್ರ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಸಿದರು.

ಪ್ರತಿಭಟನಾ ಸ್ಥಳಕ್ಕೆ ಆಗಮಿಸಿದ ತಹಶೀಲ್ದಾರ್ ಭೀಮರಾಯ ಬಿ. ರಾಮಸಮುದ್ರ ಮಾತನಾಡಿ, ರೈತರ ಬೇಡಿಕೆಗಳನ್ನು ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿಗಳಿಗೆ ಕಳುಹಿಸಲಾಗಿದೆ. ಕಾಲುವೆಗೆ ನೀರು ಹರಿಸುವ ಸಂಬಂಧ ಪ್ರಾದೇಶಿಕ ಆಯುಕ್ತರೊಂದಿಗೆ ಸಭೆ ನಡೆಸಿ ಕ್ರಮ ಕೈಗೊಳ್ಳಲಾಗುತ್ತಿದೆ. ರೈತ ಮುಖಂಡರ ನಿಯೋಗವನ್ನು ಜಿಲ್ಲಾಧಿಕಾರಿಗಳ ಬಳಿಗೆ ಕರೆದೊಯ್ದು ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಪ್ರಯತ್ನಿಸಲಾಗುವುದು ಎಂದು ಭರವಸೆ ನೀಡಿದರು.

ಹೆದ್ದಾರಿಯಲ್ಲಿ ಪ್ರತಿದಿನ ವೃದ್ಧರು, ಮಹಿಳೆಯರು, ಮಕ್ಕಳು ಹಾಗೂ ರೋಗಿಗಳು ಸೇರಿದಂತೆ ಸಾವಿರಾರು ಮಂದಿ ಸಂಚರಿಸುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದೆ ಎಂದು ಮನವಿ ಮಾಡಿದ ಹಿನ್ನೆಲೆಯಲ್ಲಿ ಪ್ರತಿಭಟನಾಕಾರರು ರಸ್ತೆ ತಡೆಯನ್ನು ಹಿಂಪಡೆದರು. ಬಳಿಕ ಜಿಲ್ಲಾಧಿಕಾರಿಗಳು ಮನವಿ ಸ್ವೀಕರಿಸುವವರೆಗೆ ರಸ್ತೆ ಪಕ್ಕದಲ್ಲಿ ಶಾಂತಿಯುತ ಅನಿರ್ದಿಷ್ಟಾವಧಿ ಪ್ರತಿಭಟನೆ ಮುಂದುವರಿಸಲು ನಿರ್ಧರಿಸಿದರು. ಸುಮಾರು ಎರಡು ಗಂಟೆಗಳ ಕಾಲ ಸ್ಥಗಿತಗೊಂಡಿದ್ದ ವಾಹನ ಸಂಚಾರ ನಂತರ ಪುನರಾರಂಭವಾಯಿತು.

ಪ್ರತಿಭಟನೆಯಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಜಿಲ್ಲಾಧ್ಯಕ್ಷ ಕೆ.ವೈ. ಬಸವರಾಜ, ತಾಲೂಕು ಅಧ್ಯಕ್ಷ ಹೊಳೆಯಪ್ಪ ಉಟಕನೂರು, ಸಿಪಿಐ(ಎಂ) ಮುಖಂಡ ಯಲ್ಲಪ್ಪ ಉಟಕನೂರು, ಕಾರ್ಮಿಕ ಸಂಘಟನೆಯ ಮುಖಂಡ ಹೆಚ್. ಶರ್ಪುದ್ದೀನ್ ಪೋತ್ನಾಳ್, ನಾಗನಗೌಡ, ದುರುಗಪ್ಪ ತಡಕಲ್, ಬಸವರಾಜ ಹಂಚಿನಾಳ, ಬಸವರಾಜ ಗೋಡಿಹಾಳ್, ಡಾ. ಬಸವರಾಜಪ್ಪ, ಮಹಾದೇವ ಯಾದವ್, ಶೇಖರಪ್ಪ ಉಟಕನೂರು, ಬಸವರಾಜಪ್ಪ ಕೋಟ್ನೆಕಲ್, ಎಸ್.ಎಂ. ಪಾಟೀಲ್ ಉದ್ಬಾಳ್, ಯಲ್ಲಪ್ಪ ಬಜಾರ್, ಮಲ್ಲೇಶಪ್ಪ ಪೋತ್ನಾಳ್, ಬಸವರಾಜ ತಡಕಲ್, ಮಲ್ಲಿಕಾರ್ಜುನ ಗೌಡ ಸೇರಿದಂತೆ ಪೋತ್ನಾಳ್ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಸಾವಿರಾರು ರೈತರು ಭಾಗವಹಿಸಿದ್ದರು.

# ಗಣೇಶ ನಾಡಿಗೆ ಸಮೃದ್ಧ ಮಳೆ-ಬೆಳೆ ನೀಡಲಿ: ಶಾಸಕ ಹಂಪಯ್ಯನಾಯಕ



ಮಾನ್ವಿ: ಪಟ್ಟಣದ ಟಿಎಪಿಎಂಸಿ ಆವರಣದಲ್ಲಿ ಅಖಿಲ ಭಾರತ ವೀರಶೈವ ಮಹಾಸಭಾ ಮಾನ್ವಿ ಘಟಕ, ತಾಲೂಕು ವೀರಶೈವ ಲಿಂಗಾಯತ ಸಮಾಜ ಹಾಗೂ ಶ್ರೀ ಗಜಾನನ ಉತ್ಸವ ಸಮಿತಿ ಮಾನ್ವಿ ವತಿಯಿಂದ ಆಯೋಜಿಸಿದ್ದ ಗಣೇಶೋತ್ಸವ ಕಾರ್ಯಕ್ರಮದಲ್ಲಿ ಶಾಸಕ ಹಂಪಯ್ಯನಾಯಕ ಭಾಗವಹಿಸಿ ಶ್ರೀ ವಿನಾಯಕನಿಗೆ ವಿಶೇಷ ಪೂಜೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಸ್ವಾತಂತ್ರ್ಯ ಹೋರಾಟದ ಸಂದರ್ಭದಲ್ಲಿ ಜನರನ್ನು ಒಗ್ಗೂಡಿಸುವ ಉದ್ದೇಶದಿಂದ ಲೋಕಮಾನ್ಯ ಬಾಲಗಂಗಾಧರ ತಿಲಕ್ ಅವರು 1893ರಲ್ಲಿ ಸಾರ್ವಜನಿಕ ಗಣೇಶೋತ್ಸವವನ್ನು ಜನಪ್ರಿಯಗೊಳಿಸಿದರು. ಹಿಂದೂ ಧರ್ಮದಲ್ಲಿ ವಿಘ್ನನಿವಾರಕ ವಿನಾಯಕನಿಗೆ ಪ್ರಥಮ ಪೂಜೆ ಸಲ್ಲಿಸುವ ಪರಂಪರೆ ಇದೆ. ಈ ಬಾರಿ ಶ್ರೀ ಗಣೇಶನು ನಾಡಿಗೆ ಸಮೃದ್ಧ ಮಳೆ-ಬೆಳೆ ನೀಡುವ ಮೂಲಕ ರೈತರು ಹಾಗೂ ಜನಸಾಮಾನ್ಯರ ಬದುಕಿನಲ್ಲಿ ಸುಖ-ಶಾಂತಿ ತರಲಿ ಎಂದು ಪ್ರಾರ್ಥಿಸಿದರು.

ಕಾರ್ಯಕ್ರಮದಲ್ಲಿ ಕಲ್ಮಠದ ಶ್ರೀ ವಿರೂಪಾಕ್ಷ ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು, ಅಖಿಲ ಭಾರತ ವೀರಶೈವ ಮಹಾಸಭಾ ಮಾನ್ವಿ ಘಟಕದ ಅಧ್ಯಕ್ಷ ಅರುಣಚಂದಾ, ರಾಜ್ಯ ಕಾರ್ಯಕಾರಿಣಿ ಸದಸ್ಯ ಸಿದ್ದಲಿಂಗಪ್ಪ ವಕೀಲರು, ತಾಲೂಕು ವೀರಶೈವ ಲಿಂಗಾಯತ ಸಮಾಜದ ಅಧ್ಯಕ್ಷ ಹರಿಹರ ಪಾಟೀಲ್, ಗೌರವಾಧ್ಯಕ್ಷ ಶ್ರೀಧರಸ್ವಾಮಿ, ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಅಬ್ದುಲ್ ಗಫೂರ್ ಸಾಬ್, ತಾಲೂಕು ಪಂಚ ಗ್ಯಾರಂಟಿ ಸಮಿತಿ ಅಧ್ಯಕ್ಷ ಬಿ.ಕೆ. ಅಮರೇಶಪ್ಪ ವಕೀಲರು, ವೀರನಗೌಡ ಪೋತ್ನಾಳ್, ಜಿ. ನಾಗರಾಜ್, ಮಹಾಂತೇಶ್ ಸ್ವಾಮಿ, ಗುಮ್ಮ ಬಸವರಾಜ್ ವಕೀಲರು, ರಾಜಾ ಸುಭಾಷ್ ಚಂದ್ರ ನಾಯಕ, ಶರಣಗೌಡ ಗವಿಗಟ್, ಸೈಯದ್ ನಜ್ರುದ್ದೀನ್ ಖಾದ್ರಿ, ಮಹಾಬಲೇಶ್ವರಗೌಡ ಚಿಕಲ್ಪರ್ವಿ, ರೇವಣಸಿದ್ದಯ್ಯ ಸ್ವಾಮಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಪ್ರಜಾಪ್ರಭುತ್ವದ ನೈಜ ಶಕ್ತಿ ಭಾರತೀಯ ಪ್ರಜೆಗಳಲ್ಲಿದೆ: ಜಿಲ್ಲಾಧಿಕಾರಿ ಪೂವಿತಾ ಎಸ್.





ರಾಯಚೂರು ಸೆ. 15 (ಕರ್ನಾಟಕ ವಾರ್ತೆ): ಪ್ರಜಾಪ್ರಭುತ್ವದ ನೈಜ ಶಕ್ತಿ ಕೇವಲ ಜನಪ್ರತಿನಿಧಿಗಳು ಅಥವಾ ಅಧಿಕಾರಿಗಳ ಕೈಯಲ್ಲಿರದೆ, ದೇಶದ ಪ್ರತಿಯೊಬ್ಬ ಭಾರತೀಯ ಪ್ರಜೆಗಳಲ್ಲಿದೆ ಎಂದು ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ಹೇಳಿದರು.

ಸೆಪ್ಟಂಬರ್ 15ರ ಮಂಗಳವಾರ ದಂದು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಮಹಾನಗರ ಪಾಲಿಕೆ, ಸಮಾಜ ಕಲ್ಯಾಣ ಇಲಾಖೆ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಉನ್ನತ ಶಿಕ್ಷಣ ಇಲಾಖೆ ಮತ್ತು ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆ ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಹಾಗೂ ತಾಲೂಕು, ಜಿಲ್ಲಾ ಮಟ್ಟದ ಯುವ ಸಂಸತ್ತು ಸಭೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಭಾರತವು 1947ರ ಆಗಸ್ಟ್ 15ರಂದು ಸ್ವತಂತ್ರಗೊಡರೆ, 1950ರ ಜನವರಿ 26 ರಂದು ಸಂವಿಧಾನವನ್ನು ಅಳವಡಿಸಿಕೊಳ್ಳುವ ಮೂಲಕ ಅಧಿಕೃತವಾಗಿ ಪ್ರಜಾಸತ್ತಾತ್ಮಕ ಗಣರಾಜ್ಯವಾಯಿತು. ಡಾ.ಬಿ.ಆರ್. ಅಂಬೇಡ್ಕರ್ ಹಾಗೂ ಅನೇಕ ಮಹನೀಯರ ದೀರ್ಘಾವಧಿಯ ದೂರದೃಷ್ಟಿಯ ಫಲವಾಗಿ ನಮಗೆ ಈ ಶ್ರೇಷ್ಠ ಸಂವಿಧಾನ ದೊರೆತಿದೆ. ಸಂವಿಧಾನ ಜಾರಿಗೆ ಬಂದು 70ಕ್ಕೂ ಹೆಚ್ಚು ವರ್ಷಗಳು ಕಳೆದರೂ, ಅದು ಇಂದಿನ ನಾಗರಿಕರ ಅಗತ್ಯತೆಗಳಿಗೆ ಅತ್ಯಂತ ಸೂಕ್ತವಾಗಿದೆ ಎಂದರು.

ಸರಕಾರದ ಆಡಳಿತವು ಪಾರದರ್ಶಕತೆ, ನ್ಯಾಯಬದ್ಧತೆ ಮತ್ತು ನಾಗರಿಕರ ಘನತೆಯನ್ನು ಎತ್ತಿಹಿಡಿಯುವಂತಿರಬೇಕು. ಪ್ರತಿಯೊಬ್ಬರಿಗೂ ಶಿಕ್ಷಣದ ಹಕ್ಕು ಸೇರಿದಂತೆ ಸಂವಿಧಾನವು ಎಲ್ಲರಿಗೂ ಸಮಾನ ಹಕ್ಕುಗಳನ್ನು ಒದಗಿಸಿದ್ದು, ಬದಲಾಗುವ ಕಾಲಕ್ಕೆ ತಕ್ಕಂತೆ ತಿದ್ದುಪಡಿಗಳನ್ನು ತರಲು ಅವಕಾಶ ಕಲ್ಪಿಸಿರುವ ಸುಧಾರಣಾವಾದಿ ವ್ಯವಸ್ಥೆ ನಮ್ಮದಾಗಿದೆ ಎಂದರು.

ದೇಶದ ಭವಿಷ್ಯದ ರೂವಾರಿಗಳಾದ ವಿದ್ಯಾರ್ಥಿಗಳು ಸಂವಿಧಾನ ನೀಡಿದ ಹಕ್ಕುಗಳು ಹಾಗೂ ಜವಾಬ್ದಾರಿಗಳನ್ನು ಅರ್ಥೈಸಿಕೊಂಡು, ಈ ಸಂದೇಶವನ್ನು ತಮ್ಮ ಮನೆ-ಮನಗಳಿಗೆ ತಲುಪಿಸುವ ರಾಯಭಾರಿಗಳಾಗಬೇಕು. ಪ್ರಜಾಪ್ರಭುತ್ವದ ಆಶಯಗಳನ್ನು ಎತ್ತಿಹಿಡಿದು ದೇಶದ ಪ್ರಗತಿಗೆ ತಾವೆಲ್ಲರೂ ಶ್ರಮಿಸಬೇಕು ಎಂದರು.

ಈ ವೇಳೆ ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ ಅವರು ಮಾತನಾಡಿ, ಪ್ರಜಾಪ್ರಭುತ್ವದ ಅತಿ ದೊಡ್ಡ ಕೊಡುಗೆ ನಮ್ಮ ಸಂವಿಧಾನ. ಸಂವಿಧಾನವು ನಮಗೆ ಮೂಲಭೂತ ಹಕ್ಕುಗಳನ್ನು ನೀಡಿದಂತೆ, ಸಮಾಜ ಮತ್ತು ಪರಿಸರದ ಕಡೆಗೆ ಕೆಲವು ಮೂಲಭೂತ ಕರ್ತವ್ಯಗಳನ್ನು ಸಹ ನಿಗದಿಪಡಿಸಿದೆ. ಆದ್ದರಿಂದ ಜಿಲ್ಲೆಯಲ್ಲಿ ಸ್ವಚ್ಛತೆ ಮತ್ತು ಉತ್ತಮ ಆಡಳಿತವನ್ನು ಕಾಯ್ದುಕೊಳ್ಳುವುದು ಕೇವಲ ಅಧಿಕಾರಿಗಳ ಹೊಣೆಗಾರಿಕೆಯಲ್ಲ, ಪ್ರತಿಯೊಬ್ಬ ನಾಗರಿಕ ಹಾಗೂ ವಿದ್ಯಾರ್ಥಿಗಳ ಜವಾಬ್ದಾರಿಯಾಗಿದೆ ಎಂದರು.

ಇತ್ತೀಚೆಗೆ ಜಿಲ್ಲೆಯ ಕೆಲವು ಶಾಲೆಗಳು, ವಸತಿ ನಿಲಯಗಳು ಮತ್ತು ಅಂಗನವಾಡಿಗಳಲ್ಲಿ ಆಹಾರ ಹಾಗೂ ಸ್ವಚ್ಛತೆಗೆ ಸಂಬಧಿಸಿದತೆ ಕೆಲವು ಸಮಸ್ಯೆಗಳು ಕಂಡುಬದಿದ್ದು, ಇವುಗಳನ್ನು ಸರಿಪಡಿಸಲು ಸಂಬಧಿಸಿದ ಅಧಿಕಾರಿಗಳ ಕರ್ತವ್ಯವಾಗಿದೆ. ಈ ನಿಟ್ಟಿನಲ್ಲಿ ಶಾಲೆ ಹಾಗೂ ಹಾಸ್ಟೆಲ್‌ಗಳಲ್ಲಿ ನೈರ್ಮಲ್ಯ ಮತ್ತು ಸ್ವಚ್ಛತೆಯನ್ನು ಕಾಯ್ದುಕೊಳ್ಳುವ ಉದ್ದೇಶದಿಂದ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ನಿರ್ಮಲ ನಿಲಯ ಅಭಿಯಾನಕ್ಕೆ ಇಂದು ಚಾಲನೆ ನೀಡಲಾಗಿದ್ದು, ದೇಶದ ಭವಿಷ್ಯವಾಗಿರುವ ವಿದ್ಯಾರ್ಥಿಗಳು ತಮ್ಮ ಶಾಲೆ, ಹಾಸ್ಟೆಲ್ ಮತ್ತು ಸುತ್ತಮುತ್ತಲಿನ ಪರಿಸರದಲ್ಲಿ ಸ್ವಚ್ಛತೆ ಕಾಪಾಡಲು ಕೈಜೋಡಿಸಬೇಕು. ಯಾವುದೇ ಸಮಸ್ಯೆಗಳಿದ್ದಲ್ಲಿ ಅಧಿಕಾರಿಗಳ ಗಮನಕ್ಕೆ ತರಬೇಕು ಎಂದರು.

ಬಯಲು ಮುಕ್ತ ಗ್ರಾಮ ಹಾಗೂ ಬಯಲು ಮುಕ್ತ ಜಿಲ್ಲೆಯನ್ನಾಗಿ ಮಾಡಲು ಸಾರ್ವಜನಿಕರ ಸಹಕಾರದೊಂದಿಗೆ ನಿರಂತರ ಶ್ರಮಿಸಲಾಗುವುದು. ಸಾರ್ವಜನಿಕರು ನೀಡುವ ಪ್ರತಿಯೊಂದು ಅರ್ಜಿಯೂ ಕೇವಲ ಕಾಗದದ ತುಂಡಲ್ಲ. ಅದರ ಹಿಂದೆ ಒಂದು ಕುಟುಂಬ, ಊರು ಹಾಗೂ ಅವರ ಕನಸುಗಳಿರುತ್ತವೆ. ಆದ್ದರಿಂದ ಅಧಿಕಾರಿಗಳು ಪ್ರತಿಯೊಂದು ಮನವಿಯನ್ನೂ ಗಂಭೀರವಾಗಿ ಪರಿಗಣಿಸಿ ಜನಪರ ಆಡಳಿತ ನೀಡಬೇಕು ಎಂದರು.

ಈ ವೇಳೆ ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹೊಪಾತ್ರ ಅವರು ಮಾತನಾಡಿ, ಐದು ವರ್ಷಕ್ಕೊಮ್ಮೆ ಮತದಾನ ಮಾಡುವುದು ಮಾತ್ರವೇ ಪ್ರಜಾಪ್ರಭುತ್ವವಲ್ಲ, ಪ್ರಜೆಗಳೇ ಪ್ರಭುಗಳಾಗಿ ಭಾಗವಹಿಸುವುದೇ ಪ್ರಜಾಪ್ರಭುತ್ವದ ನೈಜ ಬೇರು ಆಗಿದೆ. ಜಗತ್ತಿನ ಪ್ರಥಮ ಆಧ್ಯಾತ್ಮಿಕ ಹಾಗೂ ಪ್ರಜಾಸತ್ತಾತ್ಮಕ ಸಂಸತ್ತು ಎಂದರೆ ಅದು ಬಸವಕಲ್ಯಾಣ ಕರ್ನಾಟಕದ ನೆಲದಲ್ಲಿ ಜಗಜ್ಯೋತಿ ಬಸವಣ್ಣನವರು ಸ್ಥಾಪಿಸಿದ ಅನುಭವ ಮಂಟಪ. ಭಾರತವು ಜಗತ್ತಿನ ಅತಿ ದೊಡ್ಡ ಪ್ರಜಾಪ್ರಭುತ್ವ ರಾಷ್ಟ್ರವಾಗಿದೆ ಎಂದರು.

ಅಧಿಕಾರ ವಿಕೇಂದ್ರೀಕರಣ ಮತ್ತು ಸ್ಥಳೀಯ ಸಂಸ್ಥೆಗಳಿಗೆ ಆರ್ಥಿಕ ಹಾಗೂ ಆಡಳಿತಾತ್ಮಕ ಸ್ವಾತಂತ್ರ್ಯ ನೀಡುವುದರಲ್ಲಿ ಕರ್ನಾಟಕ ದೇಶದಲ್ಲೇ ಮೊದಲ ಸ್ಥಾನದಲ್ಲಿದೆ. ಬ್ರಿಟಿಷರ ಕಾಲದಲ್ಲಿ ಭಾರತೀಯರಿಗೆ ಸಿಗದಿದ್ದ ಹಕ್ಕುಗಳನ್ನು ಡಾ.ಬಿ.ಆರ್. ಅಂಬೇಡ್ಕರ್ ಅವರು ನೀಡಿದ ಸಂವಿಧಾನ ನಮಗೆ ತಂದುಕೊಟ್ಟಿದೆ. ಇದರಿಂದಾಗಿ ಬಡವರ ಮಕ್ಕಳು ಕೂಡ ಇವತ್ತು ಐಎಎಸ್, ಐಪಿಎಸ್ ಅಧಿಕಾರಿಗಳಾಗಿ ಮತ್ತು ರಾಜಕೀಯ ನಾಯಕರಾಗಿ ಸೇವೆ ಸಲ್ಲಿಸಲು ಸಾಧ್ಯವಾಗಿದೆ ಎಂದರು.

ದೇಶದ ಭವಿಷ್ಯ ಯುವಜನರ ಕೈಯಲ್ಲಿದೆ. ಮುಂದಿನ ದಿನಗಳಲ್ಲಿ ಉತ್ತಮ ಅಧಿಕಾರಿ, ಸೈನಿಕ ಅಥವಾ ನಾಯಕರಾಗುವ ಮುನ್ನ ಪ್ರತಿಯೊಬ್ಬರೂ ಮೊದಲು ಉತ್ತಮ ಮಾನವೀಯ ಮೌಲ್ಯವುಳ್ಳ ಪ್ರಜೆಯಾಗುವುದು ಅತ್ಯಗತ್ಯ ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಈ ವೇಳೆ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ವಿಶಾಂತ್ರಿ ಕುಲಪತಿಗಳಾದ ಜೆ.ಎಸ್.ಪಾಟೀಲ್ ಅವರು ವಿಶೇಷ ಉಪನ್ಯಾಸ ನೀಡಿದರು.

ಡಾ.ಬಿ.ಆರ್.ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ: ಅಂತಾರಾಷ್ಟಿಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಭಾರತ ರತ್ನ ಹಾಗೂ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ವಿವಿಧ ಗಣ್ಯರಿಂದ ಮಾಲಾರ್ಪಣೆ ಮಾಡಿ, ಗೌರವಿಸಲಾಯಿತು. ನಂತರ ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಮಲ್ಲಿಕಾರ್ಜುನ ಜಿ. ಅವರಿಂದ ಭಾರತ ಸಂವಿಧಾನದ ಪೀಠಿಕೆಯನ್ನು ಬೋಧಿಸಲಾಯಿತು.

ಪೋಸ್ಟರ್ ಬಿಡುಗಡೆ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಪರಿಶಿಷ್ಟ ವರ್ಗಗಳ ಇಲಾಣ ಮತ್ತು ಶಿಕ್ಷಣ ಇಲಾಖೆಯ ವತಿಯಿಂದ ನಿರ್ವಹಿಸಲಾಗುತ್ತಿರುವ ವಸತಿ ನಿಲಯ, ವಸತಿ ಶಾಲೆ, ಆಶ್ರಮ ಶಾಲೆಗಳಲ್ಲಿ ಸ್ವಚ್ಛತೆ ಹಾಗೂ ನೈರ್ಮಲ್ಯ ಕಾಪಾಡುವ ಉದ್ದೇಶದಿಂದ ನಿರ್ಮಲ ನಿಲಯ ಅಭಿಯಾನದ ಪೋಸ್ಟರ್ ಹಾಗೂ ಯುವ ಸಂಸತ್ತು ಪೋಸ್ಟರ್‌ಗಳನ್ನು ವಿವಿಧ ಗಣ್ಯರಿಂದ ಬಿಡುಗಡೆ ಮಾಡಲಾಯಿತು.

ಇದೇ ಸಂದರ್ಭದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಷು ಗಿರಿ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಕೃಷ್ಣ ಶಾವಂತಗೇರ, ನ್ಯಾಯವಾದಿಗಳ ಸಂಘದ ಅಧ್ಯಕ್ಷರಾದ ಎನ್.ಶಿವಶಂಕರ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಸೋಮಶೇಖರಪ್ಪ ಹೊಕ್ರಾಣಿ, ರಾಯಚೂರು ತಹಶಿಲ್ದಾರ್ ಸುರೇಶ ವರ್ಮಾ, ಡಯಟ್ ಉಪ ನಿರ್ದೇಶಕ ಚಂದ್ರಶೇಖರ ಭಂಡಾರಿ, ಆದಿಜಾಂಬವ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕ ರಾಜೇಂದ್ರ ಜಲ್ದಾರ್, ಪರಿಶಿಷ್ಟ ಪಂಗಡಗಳ ಇಲಾಖೆಯ ಅಧಿಕಾರಿ ಶಿವಮಾನಪ್ಪ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು, ವಿವಿಧ ಸಂಘಟನೆಯ ಮುಖಂಡರು ಹಾಗೂ ವಿದ್ಯಾರ್ಥಿಗಳು ಇದ್ದರು.

ಪರಶುರಾಮ ಅರೋಲಿಕರ್ ಮತ್ತು ಸಂಗಡಿಗರಿದ ಕಾರ್ಯಕ್ರಮದ ಪ್ರಾರ್ಥನಾ ಗೀತೆಯನ್ನು ನಡೆಸಲಾಯಿತು.

ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಕೃಷ್ಣ ಶಾವಂತಗೇರ ಅವರು ಸ್ವಾಗತಿಸಿದರು.

ಅಸ್ಕಿಹಾಳ ಪ್ರೌಢ ಶಾಲೆಯ ಶಿಕ್ಷಕಿ ಯಶೋಧ ಹಾಗೂ ದಂಡಪ್ಪ ಬಿರಾದಾರ್ ಅವರು ನಿರೂಪಿಸಿದರು. ರಾಯಚೂರು ತಹಶೀಲ್ದಾರ್ ಸುರೇಶ ವರ್ಮಾ ಅವರು ವಂದಿಸಿದರು.

## ಮಸರಕಲ್ ಗ್ರಾಮದಲ್ಲಿ ಶ್ರೀ ಮುರುಘೇಂದ್ರ ಸ್ವಾಮಿ ರಥೋತ್ಸವ ವಿಜೃಂಭಣೆ



ದೇವದುರ್ಗ, ಸೆ.14: ತಾಲೂಕಿನ ಮಸರಕಲ್ ಗ್ರಾಮದಲ್ಲಿ ಶ್ರೀ ಮುರುಘೇಂದ್ರ ಸ್ವಾಮಿ ರಥೋತ್ಸವವು ಸಾವಿರಾರು ಭಕ್ತರ ಸಮ್ಮುಖದಲ್ಲಿ ಭಕ್ತಿಭಾವ, ಸಡಗರ ಹಾಗೂ ವಿಜೃಂಭಣೆಯಿಂದ ಜರುಗಿತು.

ಪ್ರತಿವರ್ಷದಂತೆ ಈ ವರ್ಷವೂ ನಡೆದ ರಥೋತ್ಸವಕ್ಕೆ ಮಸರಕಲ್ ಸೇರಿದಂತೆ ಸುತ್ತಮುತ್ತಲಿನ ವಿವಿಧ ಗ್ರಾಮಗಳಿಂದ ಅಪಾರ ಸಂಖ್ಯೆಯಲ್ಲಿ ಭಕ್ತರು ಆಗಮಿಸಿದ್ದರು. ಬೆಳಗ್ಗೆಯಿಂದಲೇ ದೇವಸ್ಥಾನದಲ್ಲಿ ವಿಶೇಷ ಪೂಜೆ, ಧಾರ್ಮಿಕ ವಿಧಿ-ವಿಧಾನಗಳು ಹಾಗೂ ವಿವಿಧ ಕಾರ್ಯಕ್ರಮಗಳು ನಡೆದವು. ಭಕ್ತರು ಶ್ರೀ ಮುರುಘೇಂದ್ರ ಸ್ವಾಮಿಯ ದರ್ಶನ ಪಡೆದು ಪೂಜೆ ಸಲ್ಲಿಸಿ, ಪ್ರಸಾದ ಸ್ವೀಕರಿಸಿ ಪುನೀತರಾದರು.

ರಥೋತ್ಸವದ ಸಂದರ್ಭದಲ್ಲಿ ಅಲಂಕೃತ ರಥವನ್ನು ಭಕ್ತರು ಭಕ್ತಿಭಾವದಿಂದ ಎಳೆದು ಸಂಭ್ರಮಿಸಿದರು. ಶ್ರೀ ಮುರುಘೇಂದ್ರ ಸ್ವಾಮಿಗೆ ಜಯ ಎಂಬ ಜಯಘೋಷಗಳು ಮೊಳಗಿದವು. ಗ್ರಾಮದ ಪ್ರಮುಖ ಬೀದಿಗಳಲ್ಲಿ ರಥ ಸಂಚರಿಸುವ ವೇಳೆ ಭಕ್ತರು ಹೂವು, ಹಣ್ಣು-ಕಾಯಿ ಅರ್ಪಿಸಿ ತಮ್ಮ ಭಕ್ತಿಯನ್ನು ಸಮರ್ಪಿಸಿದರು.

ರಥೋತ್ಸವದ ಹಿನ್ನೆಲೆಯಲ್ಲಿ ಇಡೀ ಗ್ರಾಮದಲ್ಲಿ ಹಬ್ಬದ ವಾತಾವರಣ ನಿರ್ಮಾಣವಾಗಿತ್ತು. ಭಕ್ತರ ಸಂಚಾರದಿಂದ ಪ್ರಮುಖ ಬೀದಿಗಳು ಜನಜಂಗುಳಿಯಿಂದ ಕಂಗೊಳಿಸಿದವು. ರಥೋತ್ಸವಕ್ಕೆ ಆಗಮಿಸಿದ ಭಕ್ತರಿಗೆ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಲಾಗಿದ್ದು, ಯಾವುದೇ ಅಹಿತಕರ ಘಟನೆ ನಡೆಯದಂತೆ ಸಂಬಂಧಪಟ್ಟವರು ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಂಡಿದ್ದರು.

ಈ ಸಂದರ್ಭದಲ್ಲಿ ಮಠದ ಪೂಜ್ಯ ಮುರುಘೇಂದ್ರ ಸ್ವಾಮಿಗಳು, ಗ್ರಾಮದ ಮುಖಂಡರು, ಹಿರಿಯರು, ಯುವಕರು, ಮಹಿಳೆಯರು ಸೇರಿದಂತೆ ಸಾವಿರಾರು ಭಕ್ತರು ಉಪಸ್ಥಿತರಿದ್ದು ರಥೋತ್ಸವದಲ್ಲಿ ಪಾಲ್ಗೊಂಡರು.

## ಗಣಿ ನೌಕರರ ಸಮಸ್ಯೆ ಪರಿಹಾರಕ್ಕೆ ಶಾಸಕ ಮಾನಪ್ಪ ವಜ್ಜಲ್ ಮಧ್ಯಪ್ರವೇಶಕ್ಕೆ ಮನವಿ



ಹಟ್ಟಿ ಚಿನ್ನದ ಗಣಿ: ಸ್ಥಳೀಯ ಹಟ್ಟಿ ಚಿನ್ನದ ಗಣಿ ಕಂಪನಿಯಲ್ಲಿ ಹಲವು ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ನೌಕರರು ಹಾಗೂ ಕಾರ್ಮಿಕರು ವಿವಿಧ ಸಮಸ್ಯೆಗಳನ್ನು ಎದುರಿಸುತ್ತಿದ್ದು, ಅವುಗಳಿಗೆ ಶಾಶ್ವತ ಪರಿಹಾರ ಕಲ್ಪಿಸುವಂತೆ ಕಂಪನಿಯ ಮಾಜಿ ಅಧ್ಯಕ್ಷ ಹಾಗೂ ಶಾಸಕ ಮಾನಪ್ಪ ವಜ್ಜಲ್ ಅವರಿಗೆ ಕಾರ್ಮಿಕ ಮುಖಂಡರು ಮನವಿ ಸಲ್ಲಿಸಿದರು.

ವಿಶೇಷವಾಗಿ ವೈದ್ಯಕೀಯವಾಗಿ ಅನರ್ಹರಾಗಿರುವ ನೌಕರರ ಸೇವಾ ಭದ್ರತೆ ಮತ್ತು ಪರ್ಯಾಯ ಉದ್ಯೋಗದ ಸಮಸ್ಯೆ, ಹೊಸ ವೇತನ ಒಪ್ಪಂದ ಜಾರಿ, ಪಿಎಲ್‌ಐಬಿ (Production Linked Incentive Bonus) ಅನ್ನು ನ್ಯಾಯಸಮ್ಮತವಾಗಿ ಜಾರಿಗೊಳಿಸುವುದು ಸೇರಿದಂತೆ ಹಲವು ಪ್ರಮುಖ ಬೇಡಿಕೆಗಳು ಇನ್ನೂ ಬಗೆಹರಿದಿಲ್ಲ ಎಂದು ಮನವಿಯಲ್ಲಿ ತಿಳಿಸಿದ್ದಾರೆ.

ಈ ಬೇಡಿಕೆಗಳ ಕುರಿತು ಸಂಬಂಧಪಟ್ಟ ಆಡಳಿತ ಮಂಡಳಿಯ ಗಮನಕ್ಕೆ ಹಲವು ಬಾರಿ ತಂದರೂ ಸಮರ್ಪಕ ಪರಿಹಾರ ದೊರೆಯದ ಹಿನ್ನೆಲೆಯಲ್ಲಿ ಹಟ್ಟಿ ಚಿನ್ನದ ಗಣಿ ಸಿಬ್ಬಂದಿ ಹಾಗೂ ಕಾರ್ಮಿಕ ಸಂಘದ ವತಿಯಿಂದ ಮುಷ್ಕರ ನೋಟಿಸ್ ನೀಡಲಾಗಿದೆ ಎಂದು ತಿಳಿಸಿದ್ದಾರೆ.

ವೈದ್ಯಕೀಯವಾಗಿ ಅನರ್ಹರಾಗಿರುವ ನೌಕರರಿಗೆ ನ್ಯಾಯಸಮ್ಮತ ಪರಿಹಾರ ಹಾಗೂ ಸೇವಾ ಭದ್ರತೆ ಕಲ್ಪಿಸಬೇಕು. ನೌಕರರು ಮತ್ತು ಕಾರ್ಮಿಕರ ಹೊಸ ವೇತನ ಒಪ್ಪಂದವನ್ನು ಶೀಘ್ರವಾಗಿ ಜಾರಿಗೊಳಿಸಬೇಕು. ಪಿಎಲ್‌ಐಬಿಯನ್ನು ನ್ಯಾಯಸಮ್ಮತವಾಗಿ ಜಾರಿಗೊಳಿಸಿ, ನೌಕರರಿಗೆ ದೊರಕಬೇಕಾದ ಸೌಲಭ್ಯವನ್ನು ನೀಡಬೇಕು. ಕಾರ್ಮಿಕರ ಇತರೆ ಬಾಕಿ ಬೇಡಿಕೆಗಳನ್ನೂ ಮಾತುಕತೆಯ ಮೂಲಕ ತ್ವರಿತವಾಗಿ ಪರಿಹರಿಸಬೇಕು ಎಂದು ಆಗ್ರಹಿಸಿದರು.

ಕಾರ್ಮಿಕರ ಹಿತದೃಷ್ಟಿಯಿಂದ ಶಾಸಕ ಮಾನಪ್ಪ ವಜ್ಜಲ್ ಅವರು ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ, ಸರ್ಕಾರ ಹಾಗೂ ಹಟ್ಟಿ ಚಿನ್ನದ ಗಣಿ ಆಡಳಿತ ಮಂಡಳಿಯೊಂದಿಗೆ ಚರ್ಚಿಸಿ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಲ್ಪಿಸಲು ಮಧ್ಯಪ್ರವೇಶಿಸಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಶಾಂತಪ್ಪ ಆನ್ವರಿ, ಗುಂಡಪ್ಪ ಗೌಡ ಗುರಿಕಾರ್ ಸೇರಿದಂತೆ ಹಟ್ಟಿ ಚಿನ್ನದ ಗಣಿ ಸಿಬ್ಬಂದಿ, ಕಾರ್ಮಿಕ ಮುಖಂಡರು ಹಾಗೂ ಇತರರು ಉಪಸ್ಥಿತರಿದ್ದರು.

## ಶತಮಾನೋತ್ಸವದ ನೂತನ ದಾಸೋಹ ಭವನ ಕಟ್ಟಡ ನಿರ್ಮಾಣಕ್ಕೆ ಪೂರ್ವಭಾವಿ ಸಭೆ ಸೆ.20ರಂದು



ಮಾನ್ವಿ: ಸುಕ್ಷೇತ್ರ ಚೀಕಲಪರ್ವಿ ಶ್ರೀ ರುದ್ರಮುನೀಶ್ವರ ಮಠದ ಶತಮಾನೋತ್ಸವದ ಅಂಗವಾಗಿ ನೂತನ ದಾಸೋಹ ಭವನ ಕಟ್ಟಡ ನಿರ್ಮಾಣ ಕುರಿತು ಪೂರ್ವಭಾವಿ ಸಭೆಯನ್ನು ಸೆ.20ರಂದು ಬೆಳಗ್ಗೆ 9.30ಕ್ಕೆ ಹಮ್ಮಿಕೊಳ್ಳಲಾಗಿದೆ.

ಸಭೆಯ ಪಾವನ ಸಾನ್ನಿಧ್ಯವನ್ನು ಶ್ರೀ ಮ.ನಿ.ಪ್ರ. ಅಭಿನವ ಮಹಾಂತ ಮಹಾಸ್ವಾಮಿಗಳು, ಶ್ರೀ ಚರಣಗಿರಿ ಸಂಸ್ಥಾನಮಠ ಹಾಲ್ವಿ ಹಾಗೂ ಶ್ರೀ ಮ.ನಿ.ಪ್ರ. ಮಹಾಲಿಂಗ ಮಹಾಸ್ವಾಮಿಗಳು, ಶ್ರೀ ಸುವರ್ಣಗಿರಿ ವಿರಕ್ತಮಠ ಯದ್ದಲದೊಡ್ಡಿ ವಹಿಸಲಿದ್ದಾರೆ. ನೇತೃತ್ವವನ್ನು ಶ್ರೀ ಮ.ನಿ.ಪ್ರ. ಸದಾಶಿವ ಮಹಾಸ್ವಾಮಿಗಳು, ಶ್ರೀ ರುದ್ರಮುನೀಶ್ವರ ಮಠ ಚೀಕಲಪರ್ವಿ ಹಾಗೂ ಶ್ರೀ ನಿರಂಜನ ದೇವರು ಮೈಸೂರು ವಹಿಸಲಿದ್ದಾರೆ.

ಶ್ರೀ ರುದ್ರಮುನೀಶ್ವರ ಮಠದ ಶತಮಾನೋತ್ಸವದ ಹಿನ್ನೆಲೆಯಲ್ಲಿ ನೂತನ ದಾಸೋಹ ಭವನ ನಿರ್ಮಾಣಕ್ಕೆ ಸಂಬಂಧಿಸಿದಂತೆ ಸಭೆಯಲ್ಲಿ ಚರ್ಚೆ ನಡೆಸಲಾಗುವುದು. ಕಟ್ಟಡ ನಿರ್ಮಾಣದ ರೂಪುರೇಷೆ ಹಾಗೂ ಮುಂದಿನ ಕಾರ್ಯಚಟುವಟಿಕೆಗಳ ಕುರಿತು ಭಕ್ತರು ಮತ್ತು ಮುಖಂಡರೊಂದಿಗೆ ಸಮಾಲೋಚನೆ ನಡೆಯಲಿದೆ.

ಸಭೆಯಲ್ಲಿ ಸಕಲ ರಾಜಕೀಯ ಮುಖಂಡರು, ಗಣ್ಯ ವ್ಯಕ್ತಿಗಳು, ಸಾಮಾಜಿಕ ಕಾರ್ಯಕರ್ತರು, ಉದ್ಯಮಿಗಳು, ಪತ್ರಕರ್ತರು ಹಾಗೂ ಶ್ರೀಮಠದ ಸಮಸ್ತ ಗುರು-ಹಿರಿಯರು ಮತ್ತು ಭಕ್ತರು ಭಾಗವಹಿಸಲಿದ್ದಾರೆ.

ಶತಮಾನೋತ್ಸವ ಸಮಿತಿ ಹಾಗೂ ಸೇವಾಭಾಗ್ಯ ಸಮಿತಿಯವರು ಸಭೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಶ್ರೀ ಮ.ನಿ.ಪ್ರ. ಅಭಿನವ ಮಹಾಂತ ಮಹಾಸ್ವಾಮಿಗಳು ಕೋರಿದ್ದಾರೆ.

## ನಗರ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಹಿಂದುಳಿದ ವರ್ಗಗಳ ವಿಭಾಗದ ಅಧ್ಯಕ್ಷರಾಗಿ ನರಸಿಂಹ ಯಾದವ್ ಬಿಜನಗೇರ ನೇಮಕ



ರಾಯಚೂರು: ರಾಯಚೂರು ನಗರ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಹಿಂದುಳಿದ ವರ್ಗಗಳ ವಿಭಾಗದ ನೂತನ ಅಧ್ಯಕ್ಷರಾಗಿ ನರಸಿಂಹ ಯಾದವ್ ಬಿಜನಗೇರ ಅವರನ್ನು ನೇಮಕ ಮಾಡಲಾಗಿದೆ.

ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್, ವಿಧಾನ ಪರಿಷತ್ ಸದಸ್ಯ ಹಾಗೂ ಕೆಪಿಸಿಸಿ ಕಾರ್ಯಾಧ್ಯಕ್ಷ ಎ. ವಸಂತ್ ಕುಮ್ಮಾರ್ ಕೆಪಿಸಿಸಿ ಹಿಂದುಳಿದ ವರ್ಗಗಳ ರಾಜ್ಯಾಧ್ಯಕ್ಷ ಡಿ.ಟಿ. ಶ್ರೀನಿವಾಸ್ ಯಾದವ್, ರಾಯಚೂರು ಗ್ರಾಮಾಂತರ ಶಾಸಕ ಬಸನಗೌಡ ದದ್ದಲ್ ಹಾಗೂ ರಾಯಚೂರು ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಕೆ. ಶಾಂತಪ್ಪ ಅವರ ಆದೇಶ ಮತ್ತು ಮಾರ್ಗದರ್ಶನದ ಮೇರೆಗೆ ಈ ನೇಮಕಾತಿ ಮಾಡಲಾಗಿದೆ.

ಹಿಂದುಳಿದ ವರ್ಗಗಳ ಜಿಲ್ಲಾ ಅಧ್ಯಕ್ಷ ಡಿ.ಕೆ. ಮುರಳಿ ಯಾದವ್ ಅವರು ನರಸಿಂಹ ಯಾದವ್ ಬಿಜನಗೇರ ಅವರಿಗೆ ಅಧಿಕೃತ ನೇಮಕಾತಿ ಆದೇಶದ ಪ್ರತಿಯನ್ನು ನೀಡಿ ಅಭಿನಂದಿಸಿ ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಮುಖಂಡರು, ಹಿಂದುಳಿದ ವರ್ಗಗಳ ಜನರನ್ನು ಪಕ್ಷದ ಸಂಘಟನೆಯೊಂದಿಗೆ ಇನ್ನಷ್ಟು ಪರಿಣಾಮಕಾರಿಯಾಗಿ ಸಂಪರ್ಕಿಸುವುದು, ಅವರ ಸಮಸ್ಯೆಗಳು ಹಾಗೂ ಬೇಡಿಕೆಗಳನ್ನು ಪಕ್ಷದ ವೇದಿಕೆಯಲ್ಲಿ ಪ್ರಸ್ತಾಪಿಸುವುದು ಮತ್ತು ನಗರ ವಿಧಾನಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಸಂಘಟನೆಯನ್ನು ಮತ್ತಷ್ಟು ಬಲಪಡಿಸುವಲ್ಲಿ ನೂತನ ಅಧ್ಯಕ್ಷರು ಪ್ರಮುಖ ಪಾತ್ರ ವಹಿಸಬೇಕು ಎಂದು ಆಶಿಸಿದರು.

ನರಸಿಂಹ ಯಾದವ್ ಬಿಜನಗೇರ ಅವರು ಹಿಂದುಳಿದ ವರ್ಗಗಳ ವಿವಿಧ ಸಮುದಾಯಗಳನ್ನು ಒಗ್ಗೂಡಿಸಿ, ಪಕ್ಷದ ತತ್ವ-ಸಿದ್ಧಾಂತಗಳು ಹಾಗೂ ಸರ್ಕಾರದ ಜನಪರ ಯೋಜನೆಗಳನ್ನು ಜನರಿಗೆ ತಲುಪಿಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸಬೇಕು. ಬೂತ್ ಮತ್ತು ವಾರ್ಡ್ ಮಟ್ಟದಲ್ಲಿ ಸಂಘಟನೆಗೆ ಚೈತನ್ಯ ತುಂಬಿ, ಯುವಕರು ಹಾಗೂ ಸಮಾಜದ ವಿವಿಧ ವರ್ಗಗಳನ್ನು ಪಕ್ಷದ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಳ್ಳುವಂತೆ ಮಾಡುವ ಜವಾಬ್ದಾರಿಯೂ ಅವರ ಮೇಲಿದೆ ಎಂದು ತಿಳಿಸಲಾಯಿತು.

ನೂತನ ಅಧ್ಯಕ್ಷರಾಗಿ ನೇಮಕಗೊಂಡ ನರಸಿಂಹ ಯಾದವ್ ಬಿಜನಗೇರ ಅವರು, ಪಕ್ಷದ ಹಿರಿಯ ನಾಯಕರು ತಮ್ಮ ಮೇಲೆ ಇಟ್ಟಿರುವ ವಿಶ್ವಾಸಕ್ಕೆ ಕೃತಜ್ಞತೆ ಸಲ್ಲಿಸಿ, ನೀಡಿರುವ ಜವಾಬ್ದಾರಿಯನ್ನು ನಿಷ್ಠೆಯಿಂದ ನಿರ್ವಹಿಸುವುದಾಗಿ ತಿಳಿಸಿದರು. ಹಿಂದುಳಿದ ವರ್ಗಗಳ ಸಮುದಾಯದ ಹಿತಾಸಕ್ತಿಗಳನ್ನು ಕಾಪಾಡುವುದರ ಜೊತೆಗೆ ಕಾಂಗ್ರೆಸ್ ಪಕ್ಷವನ್ನು ನಗರ ವಿಧಾನಸಭಾ ಕ್ಷೇತ್ರದಲ್ಲಿ ಇನ್ನಷ್ಟು ಬಲಿಷ್ಠಗೊಳಿಸಲು ಶ್ರಮಿಸುವುದಾಗಿ ಹೇಳಿದರು.

ನೂತನ ನೇಮಕಾತಿಗೆ ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ಹಾಗೂ ಬೆಂಬಲಿಗರು ಅಭಿನಂದನೆ ಸಲ್ಲಿಸಿ, ಮುಂದಿನ ರಾಜಕೀಯ ಮತ್ತು ಸಂಘಟನಾ ಕಾರ್ಯಗಳಿಗೆ ಶುಭ ಹಾರೈಸಿದರು.

## ಶಿಕ್ಷಣದಿಂದ ಪ್ರಜಾಪ್ರಭುತ್ವ ಮತ್ತಷ್ಟು ಗಟ್ಟಿಯಾಗುತ್ತದೆ: ಸಹಾಯಕ ಆಯುಕ್ತ ನಾಗೇಂದ್ರ ಬಾಬು




ಲಿಂಗಸುಗೂರು: ಮಾನವ ಹಕ್ಕುಗಳ ರಕ್ಷಣೆ, ಪ್ರಜಾಪ್ರಭುತ್ವದ ಮೌಲ್ಯಗಳ ಎತ್ತಿಹಿಡಿಯುವಿಕೆ ಮತ್ತು ಸಾರ್ವಜನಿಕರ ಸಕ್ರಿಯ ಭಾಗವಹಿಸುವಿಕೆ ಪ್ರಜಾಪ್ರಭುತ್ವದ ಪ್ರಮುಖ ಉದ್ದೇಶಗಳಾಗಿವೆ. ಪ್ರತಿಯೊಬ್ಬ ಪ್ರಜೆಯಿಗೂ ಶಿಕ್ಷಣ ಅತ್ಯಂತ ಮಹತ್ವದ ಅಂಶವಾಗಿದ್ದು, ಶಿಕ್ಷಣದಿಂದ ಪ್ರಜಾಪ್ರಭುತ್ವ ವ್ಯವಸ್ಥೆ ಮತ್ತಷ್ಟು ಗಟ್ಟಿಯಾಗುತ್ತದೆ ಎಂದು ಸಹಾಯಕ ಆಯುಕ್ತ ನಾಗೇಂದ್ರ ಬಾಬು ಕುಮಾರ ಹೇಳಿದರು.

ತಾಲೂಕು ಆಡಳಿತದ ವತಿಯಿಂದ ಆಯೋಜಿಸಿದ್ದ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಹಾಗೂ ಯುವ ಸಂಸತ್ತು ಸಭೆಗೆ ಚಾಲನೆ ನೀಡಿ ಅವರು ಮಾತನಾಡಿದರು.

ಪ್ರಜಾಪ್ರಭುತ್ವ ವ್ಯವಸ್ಥೆಗೆ ಸಂವಿಧಾನವೇ ಅತಿ ದೊಡ್ಡ ಆಧಾರವಾಗಿದ್ದು, ನಾಗರಿಕರಿಗೆ ಮೂಲಭೂತ ಹಕ್ಕುಗಳು, ಕರ್ತವ್ಯಗಳು ಹಾಗೂ ಸಾಮಾಜಿಕ ಭದ್ರತೆ ಒದಗಿಸಿದೆ. ಸಂವಿಧಾನದ ಮೌಲ್ಯಗಳು ಮತ್ತು ಪ್ರಜಾಪ್ರಭುತ್ವದ ಕಾರ್ಯವಿಧಾನವನ್ನು ಯುವ ಪೀಳಿಗೆ ತಿಳಿದುಕೊಳ್ಳುವುದು ಅತ್ಯಂತ ಅಗತ್ಯ ಎಂದು ಹೇಳಿದರು.

ಶಾಲೆ ಮತ್ತು ಕಾಲೇಜು ಮಟ್ಟದಲ್ಲಿ ಯುವ ಸಂಸತ್ತು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದರಿಂದ ವಿದ್ಯಾರ್ಥಿಗಳಿಗೆ ಸಂಸತ್ತು ಹಾಗೂ ವಿಧಾನಮಂಡಲಗಳ ಕಾರ್ಯವಿಧಾನ, ನಿಯಮಗಳು, ಸದಸ್ಯರ ಕರ್ತವ್ಯಗಳು ಮತ್ತು ಜನಪ್ರತಿನಿಧಿಗಳ ಜವಾಬ್ದಾರಿಗಳ ಕುರಿತು ಅರಿವು ಮೂಡುತ್ತದೆ. ಇಂತಹ ಕಾರ್ಯಕ್ರಮಗಳು ವಿದ್ಯಾರ್ಥಿಗಳಲ್ಲಿ ನಾಯಕತ್ವ ಗುಣ, ಚರ್ಚಾ ಮನೋಭಾವ ಹಾಗೂ ಸಾರ್ವಜನಿಕ ಸಮಸ್ಯೆಗಳ ಕುರಿತು ಸ್ಪಂದಿಸುವ ಸಾಮರ್ಥ್ಯವನ್ನು ಬೆಳೆಸುತ್ತವೆ ಎಂದರು.

ಯುವ ಸಂಸತ್ತು ಕಾರ್ಯಕ್ರಮಗಳಲ್ಲಿ ಶಾಲೆ-ಕಾಲೇಜು ವಿದ್ಯಾರ್ಥಿಗಳನ್ನು ಆಯ್ಕೆ ಮಾಡಿ ತಾಲೂಕು, ಜಿಲ್ಲಾ ಹಾಗೂ ರಾಜ್ಯಮಟ್ಟದ ಹಂತಗಳಿಗೆ ಕಳುಹಿಸಲಾಗುತ್ತದೆ. ಇದರಿಂದ ವಿದ್ಯಾರ್ಥಿಗಳು ಭವಿಷ್ಯದಲ್ಲಿ ಉತ್ತಮ ಜನಪ್ರತಿನಿಧಿಗಳಾಗಿ ರೂಪುಗೊಳ್ಳಲು ಪ್ರೇರಣೆ ಪಡೆಯಬಹುದು. ಜನರ ಸಮಸ್ಯೆಗಳನ್ನು ಅರ್ಥಮಾಡಿಕೊಂಡು ಅವುಗಳಿಗೆ ಪರಿಹಾರ ಕಂಡುಕೊಳ್ಳುವ ಮನೋಭಾವವೂ ಬೆಳೆಸಬಹುದು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಶಾಸಕ ಮಾನಪ್ಪ ವಜ್ಜಲ್ ಹಾಗೂ ವಿಧಾನ ಪರಿಷತ್ ಸದಸ್ಯ ಶರಣಗೌಡ ಪಾಟೀಲ ಬಯ್ಯಾಪುರ ಮಾತನಾಡಿ, ಪ್ರಜಾಪ್ರಭುತ್ವದ ಮೌಲ್ಯಗಳನ್ನು ಉಳಿಸಿ ಬೆಳೆಸುವಲ್ಲಿ ಯುವಜನರ ಪಾತ್ರ ಮಹತ್ವದ್ದಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಪಾಮಯ್ಯ ಮುರಾರಿ, ಪಿಕಾರ್ಡ್ ಬ್ಯಾಂಕ್ ಅಧ್ಯಕ್ಷ ಸಿದ್ದರಾಮೇಶ ಪಾಗದ, ಎಪಿಎಂಸಿ ಅಧ್ಯಕ್ಷ ಅಮರೇಶ ಹೆಸರೂರ, ಟಿಎಪಿಸಿಎಂಎಸ್ ಅಧ್ಯಕ್ಷ ಶಶಿಧರ ಪಾಟೀಲ ಆಶಿಹಾಳ, ತಹಶೀಲ್ದಾರ್ ಸತ್ಯಮ್ಮ, ಸಮಾಜ ಕಲ್ಯಾಣ ಇಲಾಖೆ ಅಧಿಕಾರಿ ರವೀಂದ್ರ ಉಪ್ಪಾರ, ಕ್ಷೇತ್ರ ಶಿಕ್ಷಣಾಧಿಕಾರಿ ಸುಜಾತ ಹುನೂರು ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಇತರರು ಭಾಗವಹಿಸಿದ್ದರು.




Printed By and Published By Tunga Bimba Printers & Publishers 4-4-401/94, Gulbraga Builders Layout, Opp Navodaya Hospital, Yeragera Road, Raichur-584103. Editor: Gururaja.K